30 August 2026 Sunday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 257 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

ಭಾವನಾಂತರಂಗ

ಗೌರವ ಒತ್ತಾಯದಿಂದ ತೆಗೆದುಕೊಳ್ಳಲು ಬರುವುದಿಲ್ಲ! ಅದಕ್ಕೆ ವ್ಯಕ್ತಿಯ ವ್ಯಕ್ತಿತ್ವ ದೊಡ್ಡದಿರಬೇಕು!

-ಸ್ನೇಹಾ ಆನಂದ್

ಮಾಠ, ಮಾನ್ಯಗಳಂದ ಮಾತ್ರ ಶಿಕ್ಷಣಕ್ರಾಂತಿ: ಡಿ.ಕೆ.ಶಿವಕುಮಾರ್ ಪುಟ ಸಂ. 2

ಕ್ಷೇತ್ರ ರಾಜಕರಣಕ್ಕೆ ಬಂದರೆ ಪಾದ ತೊಳೆದು ಸ್ವಾಗತ: ಎಚ್‌ಡಿಕೆಗೆ ಶಾಸಕರ ಪುಟ ಸಂ. 3

ಪಕ್ಷಕ್ಕೆ ಮುಜುಗರ ಆಗಬಾರದೆಂದು ನಾಗೇಂದ್ರ ರಾಜೀನಾಮೆ: ಡಿಸಿಎಂ ಪುಟ ಸಂ. 4

ಬಿಜೆಪಿ ಪಾದಯಾತ್ರೆ ಮುಂದುವರಿಯಲಿದೆ

ಸರ್ಕಾರದ ವಿರುದ್ಧ ಹೋರಾಟ ನಡೆಯಲಿದೆ: ಬಿ.ವೈ.ವಿಜಯೇಂದ್ರ

ತುಮಕೂರು: ರಾಜ್ಯದ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಪಾದಯಾತ್ರೆ ಮಾಡೇ ಮಾಡುತ್ತೇವೆ. ವಾಲ್ಮೀಕಿ ನಿಗಮದ 187 ಕೋಟಿ ವಾಪಸ್ ಬರೋವರೆಗೂ ಹೋರಾಟ ನಡೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ನಗರದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪೂರ್ವ ನಿಗದಿಯಂತೆ ಸೆಪ್ಟೆಂಬರ್ 1ರಿಂದ ಲಿಂಗಸೂರಿನಿಂದ ಬಳ್ಳಾರಿವರೆಗೂ ಪಾದಯಾತ್ರೆ ನಡೆಯಲಿದೆ. ಪಾದಯಾತ್ರೆ ಕುರಿತು ರಾಷ್ಟ್ರೀಯ ನಾಯಕರ ಬಳಿ ಚರ್ಚೆ ಮಾಡಿದ್ದೇನೆ. ಅವರೂ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಯಶಸ್ವಿಯಾಗಿ ಮಾಡುವಂತೆ ನಿರ್ದೇಶನ ನೀಡಿದ್ದಾರೆ ಎಂದರು.

ಸಚಿವ ನಾಗೇಂದ್ರ ರಾಜೀನಾಮೆ ಕೊಡಲು ಬಿಜೆಪಿ ಜೆಡಿಎಸ್ ಕಾರ್ಯಕರ್ತರ ಹೋರಾಟವೇ ಕಾರಣ. ಏಳು ದಿನಗಳ ಕಾಲ ನಮ್ಮ ಕಾರ್ಯಕರ್ತರು ಹಗಲು ರಾತ್ರಿ ಹೋರಾಟ ಮಾಡಿದ್ದಾರೆ. ವಿಧಾನಸೌಧಕ್ಕೆ ಮುತ್ತಿಗೆ ಹಾಕಿದ್ದು ಎಲ್ಲವೂ ಪರಿಣಾಮಕಾರಿಯಾಗಿ ಆಗಿದೆ. ಹಾಗಾಗಿ ಅವರು ರಾಜೀನಾಮೆ ಕೊಡುವ ಪ್ರಸಂಗ ಬಂದಿದೆ. ನಮ್ಮ ಹೋರಾಟ ಒಬ್ಬ ವ್ಯಕ್ತಿ ವಿರುದ್ಧ ಇರಲಿಲ್ಲ. ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧವಾಗಿತ್ತು. ದಲಿತರ ಹಣ ಲೂಟಿ ಮಾಡಿದ ಸರ್ಕಾರದ ವಿರುದ್ಧ ನಮ್ಮ ಹೋರಾಟ ಮಾಡಿದ್ದೇವೆ ಎಂದು ಹೇಳಿದರು. ಹೋರಾಟ ಇಲ್ಲಿಗೆ ಮುಗಿಯಲ್ಲ. ವಾಲ್ಮೀಕಿ ನಿಗಮದ 187 ಕೋಟಿ ರೂ. ವಾಪಸ್ ಬರೋವರೆಗೂ ಮುಂದುವರಿಯಲಿದೆ. ಪುಟ 2ಕ್ಕೆ



ವಿಧಾನಸೌಧ, ಅರಮನೆಗೆ 'ಪಿಂಕ್‌ಲೈಟ್'

ಗೃಹಲಕ್ಷ್ಮಿಯೋಜನೆಗೆ 3 ವರ್ಷದ ಸಂಭ್ರಮದ ಹಿನ್ನೆಲೆ

ಬೆಂಗಳೂರು: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮಿ ಮೂರು ವರ್ಷ ಪೂರೈಸಿದ ಸಂಭ್ರಮದ ಹಿನ್ನೆಲೆಯಲ್ಲಿ ಆ.30ರಂದು ಭಾನುವಾರ ಬೆಂಗಳೂರಿನ ವಿಧಾನಸೌಧ, ಬೆಳಗಾವಿ ಸುವರ್ಣಸೌಧ ಮತ್ತು ಮೈಸೂರು ಅರಮನೆ ಸೇರಿದಂತೆ ಹಲವೆಡೆ ಗುಲಾಬಿ ಬಣ್ಣದ ಲೈಟ್‌ಗಳು ಕಂಗೊಳಿಸಲಿವೆ.

ಚಿತ್ರದುರ್ಗದ ಕಲ್ಲಿನಕೋಟೆ, ಹಂಪಿಯ ಕಲ್ಲಿನರಥ ಸೇರಿದಂತೆ ಹಲವೆಡೆ ಭಾನುವಾರ ಸಂಜೆ 6ರಿಂದ ರಾತ್ರಿ 10ರವರೆಗೆ ಗುಲಾಬಿ ಬಣ್ಣದ ಬೆಳಕಿನಲ್ಲಿ ಕಂಗೊಳಿಸಲಿವೆ. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಪ್ರತಿ ಮನೆಯ ಯಜಮಾನಿಗೆ ಪ್ರತಿ ತಿಂಗಳು 2,000 ರೂ. ನೀಡುವ ಮೂಲಕ ಮಹಿಳೆಯರು ಪುಟ 2ಕ್ಕೆ

ಕೆಪಿಎಸ್‌ಸಿ ನೇಮಕಾತಿ ಹಗರಣ: 11 ಗಂಟೆ ಗ್ಯಾನೇಂದ್ರ ವಿಚಾರಣೆ

ಬೆಂಗಳೂರು: ಕೆಪಿಎಸ್‌ಸಿ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮ ಪ್ರಕರಣದಲ್ಲಿ ಇಡಿ ರೇಡ್ ಆಗಿದ್ದಂತೆ ಎಸ್ಕೇಪ್ ಆಗಿದ್ದ ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಬೆಂಗಳೂರಿಗೆ ಆಗಮಿಸಿ ಸಿಐಡಿ ವಿಚಾರಣೆ ಎದುರಿಸಿದರು.

ಸಿಐಡಿ ನೋಟೀಸ್ ಹಿನ್ನೆಲೆಯಲ್ಲಿ ಗ್ಯಾನೇಂದ್ರ ವಿಚಾರಣೆಗೆ ಹಾಜರಾಗಿದ್ದರು. ಸತತ 11 ಗಂಟೆಗಳ ಕಾಲ ಸಿಐಡಿ ಕಚೇರಿಯಲ್ಲಿ ವಿಚಾರಣೆ ಎದುರಿಸಿದ್ದಾರೆ.

ಯಾವ ರೀತಿ ಪರೀಕ್ಷಾ ತಯಾರಿ ಆಗಿತ್ತು? ಏನೆಲ್ಲಾ ಮುಂಜಾಗ್ರತಾ ಕ್ರಮಗಳನ್ನ ತೆಗೆದುಕೊಳ್ಳಲಾಗಿತ್ತು? ಪೇಪರ್ ಲೀಕ್ ಆಗಿರುವ ವಿಚಾರ ಯಾವಾಗ ಗೊತ್ತಾಗಿದ್ದು? ಎಂದು ಸಿಐಡಿ ಅಧಿಕಾರಿಗಳು

ಪ್ರಶ್ನೆಗಳ ಮಳೆ ಸುರಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ನೀಡಿದ ಗ್ಯಾನೇಂದ್ರ ಅವರ ಹೇಳಿಕೆಗಳನ್ನೂ ದಾಖಲಿಸಿಕೊಂಡಿದ್ದಾರೆ.

ಗ್ಯಾನೇಂದ್ರ ಕುಮಾರ್ ಎಸ್ಕೇಪ್ ಆಗಿದ್ದರ ಹಿಂದೆ ಸರ್ಕಾರದ ಕೈವಾಡ ಇದೆ. ಜಾರಿ ನಿರ್ದೇಶನಾಲಯದ ಅಧಿಕಾರಿಗಳಿಗೆ ಸಿಗದಂತೆ ಮಾಡಿದ್ದೇ ರಾಜ್ಯ ಸರ್ಕಾರ ಅಂತ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ.

ಆರ್‌ಎಸ್‌ಎಸ್ ಅವಹೇಳನ: ಪ್ರಿಯಾಂಕ್, ನಲಪಾಡ್‌ಗೆ ಜಾಮೀನು

ಬೆಂಗಳೂರು: ಆರ್‌ಎಸ್‌ಎಸ್ ಕುರಿತು ಅವಹೇಳನಕಾರಿ ಪೋಸ್ಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಮೊಹಮ್ಮದ್ ನಲಪಾಡ್‌ಗೆ ಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಪ್ರಕರಣದ ವಿಚಾರಣೆ ನಡೆಸಿದ 42ನೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಬ್ಬರಿಗೂ ಜಾಮೀನು ಮಂಜೂರು ಮಾಡಿದೆ. ತಲಾ 10 ಸಾವಿರ ರೂ. ವೈಯಕ್ತಿಕ ಶ್ಯೂರಿಟಿ ನೀಡುವಂತೆ ಕೋರ್ಟ್ ಸೂಚಿಸಿದೆ.

ತೇಜಸ್ ಗೌಡ ಎಂಬವರು ಕೋರ್ಟ್ಗೆ ಖಾಸಗಿ ದೂರು ನೀಡಿದ್ದರು. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಕಾಂಗ್ರೆಸ್ ಮುಖಂಡ ನಲಪಾಡ್‌ಗೆ ಕೋರ್ಟ್ ಸಮನ್ಸ್ ಜಾರಿ ಮಾಡಿತ್ತು. ಕಳೆದ ವಿಚಾರಣೆ ವೇಳೆ ಇಬ್ಬರೂ ನಾಯಕರು ಕೋರ್ಟ್ನಿಂದ ವಿನಾಯಿತಿ ಪಡೆದುಕೊಂಡಿದ್ದರು.

ಕಾಂಗ್ರೆಸ್‌ಗೆ ಮುಜುಗರ ಏಕೆ: ಡಿಕೆಶಿಗೆ ಎಚ್‌ಡಿಕೆ ಟಾಂಗ್

ಮಂಡ್ಯ: ಸರ್ಕಾರ ಹಾಗೂ ಪಕ್ಷಕ್ಕೆ ಆಗುವ ಮುಜುಗರ ತಪ್ಪಿಸಲು ನಾಗೇಂದ್ರ ರಾಜೀನಾಮೆ ನೀಡಿದ್ದೇನೆ ಎಂದಿದ್ದಾರೆ. ಆದರೆ, ಯಾವ ಕಾರಣಕ್ಕೆ ಕಾಂಗ್ರೆಸ್‌ಗೆ ಮುಜುಗರ ಆಗುತ್ತಿದೆ. ಪುಟ 2ಕ್ಕೆ

ನಿಮ್ಮ ಚರಿತ್ರೆ ಬಿಚ್ಚಿದರೆ ಬಯಲು!

ನಾನು ಸಿಎಂ ಆಗಿದ್ದು ಸಹಿಸಲಾಗುತ್ತಿಲ್ಲ । ಎಚ್‌ಡಿಕೆಗೆ ಡಿಕೆಶಿ ತಿರುಗೇಟು

ಮೈಸೂರು: ನಾನು ಮುಖ್ಯಮಂತ್ರಿ ಆಗಿರುವುದನ್ನು ಬಿಜೆಪಿ ಮತ್ತು ಜೆಡಿಎಸ್‌ಗೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದರು.

ನಗರದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಎಚ್.ಡಿ. ಕುಮಾರಸ್ವಾಮಿ ಏನು ಬೇಕಾದರೂ ಮಾತನಾಡಲಿ. ಅವರ ಅಸೂಯೆಗೆ ಮದ್ದಿಲ್ಲ. ಅವರಿಗೆ ರಾಜಕಾರಣವೇ ಮುಖ್ಯವೇ ಹೊರತು ರಾಜ್ಯದ ಹಿತಾಸಕ್ತಿ ಅಲ್ಲ ಎಂದು ಟೀಕಿಸಿದರು.

ಡಿ.ಕೆ.ವಿಧಾನಸೌಧ ಮಾರುತ್ತಾರೆ ಎಂಬ ಎಚ್‌ಡಿಕೆ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಯಡ್ಯಾರು ಏನೇನು ಮಾರಲು ಹೊರಟಿದ್ದರು ಎಂಬ ಬಗ್ಗೆ ಚರಿತ್ರೆ ಬಿಚ್ಚಿಟ್ಟರೆ ಎಲ್ಲವೂ ಬಯಲಾಗುತ್ತದೆ. ನಾನು ಸದ್ಯಕ್ಕೆ ಆ ತಂಟೆಗೆ ಹೋಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಕುಮಾರಸ್ವಾಮಿಗೆ ಬಾಯಿ ಚಪಲ. ಚಪಲಕ್ಕೆ ಮಾತನಾಡಿ ಖುಷಿ ಪಡಲಿ ಬಿಡಿ. ಇನ್ನೂ ನನ್ನ ಬಗ್ಗೆ ಟೀಕೆ ಮಾಡಲಿ. ನಾನು ಸಿಎಂ ಆಗಿರುವುದು ಕೆಲವರಿಗೆ ಅಸೂಯೆ ತಂದಿದೆ. ಕುಮಾರಸ್ವಾಮಿ ಮಾತ್ರ ಅಲ್ಲ ಬಿಜೆಪಿ ಜೊತೆಗೆ ಎನ್‌ಡಿಎಯ ಇಡೀ ಕೂಟಕ್ಕೆ ನಾನು ಸಿಎಂ ಆಗಿರುವುದು ಸಹಿಸಲು ಸಾಧ್ಯವಿಲ್ಲ. ಹೀಗಾಗಿ ಏನೇನೋ ಮಾತನಾಡುತ್ತಿದ್ದಾರೆ. ಆದರೆ ಒಂದು ಸತ್ಯ ಟೀಕೆಗಳು ಸಾಯುತ್ತವೆ. ಮಾಡಿದ ಕೆಲಸ ಉಳಿಯುತ್ತದೆ. ಇದನ್ನು ನಂಬಿದವ ನಾನು ಎಂದು ತಿರುಗೇಟು ನೀಡಿದರು.

ಬಿಜೆಪಿ ತನ್ನ ರಾಜಕೀಯಕ್ಕಾಗಿ ನಿರಪರಾಧಿಯನ್ನು ಬಲಿ ತೆಗೆದುಕೊಂಡಿದೆ. ಯಾವ ತಪ್ಪು ಮಾಡದೇ ಇದ್ದರೂ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದಾರೆ. ನಾಗೇಂದ್ರ ರಾಜೀನಾಮೆ ನಂತರವೂ ಬಿಜೆಪಿಯವರು ಪಾದಯಾತ್ರೆ ಮಾಡುವುದಾದರೆ ಮಾಡಲಿ. ಅವರಿಗೆ ರಾಜಕೀಯ ಬೇಕು. ಹೀಗಾಗಿ ಪಾದಯಾತ್ರೆ ಮಾಡುತ್ತಿದ್ದಾರೆ. ನನ್ನ ಒಂದೇ ಒಂದು ಪ್ರಶ್ನೆಗೆ ಬಿಜೆಪಿಯವರು ಉತ್ತರ ಕೊಡಲಿಲ್ಲ. ಯಾವ ಕಾರಣಕ್ಕಾಗಿ ನಾಗೇಂದ್ರ ರಾಜೀನಾಮೆ ಕೇಳಿದರು ಎಂಬುದಕ್ಕೆ ಬಿಜೆಪಿಯವರು ಉತ್ತರ ಕೊಡಲಿ ಎಂದರು.

ಹನೂರು ಶೂಟೌಟ್ ವಿಚಾರವಾಗಿ ಮಾತನಾಡಿದ ಅವರು, ತನಿಖಾ ವರದಿ ನಮ್ಮ ಕೈಸೇರಿದೆ. ಇಡೀ ಪ್ರಕರಣವನ್ನು ಸಿಐಡಿಗೆ ವಹಿಸಿದ್ದೇವೆ. ತನಿಖೆ ನಡೆಯುತ್ತಿದೆ. ಈಗ ಬಂದಿರುವ ತನಿಖಾ ವರದಿಯಲ್ಲಿ ಹಲವು ಅಂಶಗಳು ಇವೆ. ಅವರು ಹತ್ತಿರದಿಂದ ಶೂಟ್ ಮಾಡಿರುವ ಬಗ್ಗೆ ಪ್ರಸ್ತಾಪ ಇದೆ. ಅವರ ಬಳಿ ಏನೇನು ವಸ್ತುಗಳು ಇತ್ತು. ಕಾಡಿಗೆ ಯಾವ ಕಾರಣಕ್ಕೆ ಹೋದರು ಎಂಬ ಬಗ್ಗೆ ಪ್ರಸ್ತಾಪ ಇದೆ. ಸಿಐಡಿ ತನಿಖೆ ಮುಗಿಯಲಿ ಎಲ್ಲವೂ ಬಹಿರಂಗವಾಗುತ್ತದೆ ಎಂದು ಹೇಳಿದರು

ಮೈಸೂರು ಸೇರಿ 5 ನಗರಗಳ ಅಭಿವೃದ್ಧಿಗೆ ವಿಶೇಷ ಯೋಜನೆ

ಮೈಸೂರು: ರಾಜಧಾನಿ ಬೆಂಗಳೂರಿನ ಜನದಟ್ಟಣೆ ತಗ್ಗಿಸುವ ಉದ್ದೇಶದಿಂದ ರಾಜ್ಯದ ಐದು ಪ್ರಮುಖ ನಗರಗಳಲ್ಲಿ ಮೂಲಸೌಕರ್ಯ ಹಾಗೂ ಉದ್ಯೋಗ ಸೃಷ್ಟಿಗೆ ವಿಶೇಷ ಒತ್ತು ನೀಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ನಗರದಲ್ಲಿ ಶನಿವಾರ ಪತ್ರಕರ್ತರ ಜೊತೆ ಮಾತನಾಡಿದ ಅವರು, ಮೈಸೂರು, ಕಲಬುರಗಿ, ಬೆಳಗಾವಿ, ಹುಬ್ಬಳ್ಳಿ–ಧಾರವಾಡ ಸೇರಿದಂತೆ 5 ಪ್ರಮುಖ ನಗರಗಳಲ್ಲಿ ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗಾವಕಾಶಗಳನ್ನು ಉತ್ತೇಜಿಸಲು ಅಭಿವೃದ್ಧಿಗೆ ವಿಶೇಷ ಯೋಜನೆ ರೂಪಿಸಲಾಗುವುದು. ರಾಜ್ಯದ ಸಣ್ಣ ಹಾಗೂ ದೊಡ್ಡ ನಗರಗಳಲ್ಲಿ ಟ್ರಾಫಿಕ್ ದಟ್ಟಣೆ ತಪ್ಪಿಸಲು ರಿಂಗ್ ರಸ್ತೆ ನಿರ್ಮಾಣ ಯೋಜನೆಗೆ ಈಗಾಗಲೇ ಚಾಲನೆ ನೀಡಲಾಗಿದೆ ಎಂದು ಹೇಳಿದರು.

ಅದ್ದೂರಿ ದಸರಾಗೆ ಸಿದ್ಧತೆ

ವಾಯುಸೇನೆಗೂ ಆಹ್ವಾನ, ನಾಡಹಬ್ಬಕ್ಕೆ ಹೊಸ ರೂಪ: ಸಿಎಂ ಡಿಕೆಶಿ

ಮೈಸೂರು: ನಾಡಹಬ್ಬ ಮೈಸೂರು ದಸರಾ ವಿಜಯದಶಮಿ ಮೆರವಣಿಗೆಯಲ್ಲಿ ಪಾಲ್ಗೊಳ್ಳುವಂತೆ ಮಿಲಿಟರಿ ಹಾಗೂ ವಾಯುಸೇನೆಗೂ ಮನವಿ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ನಗರದಲ್ಲಿ ಶನಿವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ಬರವಿದೆ ಎಂಬ ಕಾರಣಕ್ಕೆ ಸರಳ ದಸರಾ ಆಚರಿಸಲು ಸಾಧ್ಯವಿಲ್ಲ. ದಸರಾ ನಾಡಹಬ್ಬ ಆಗಿದ್ದು, ಅದು ಎಂದಿನಂತೆ ಅದ್ದೂರಿಯಾಗಿಯೇ ನಡೆಯಲಿದೆ ಎಂದು ಸ್ಪಷ್ಟಪಡಿಸಿದರು.

ದಸರಾಗೆ ಪಾರಂಪರಿಕತೆ ಜೊತೆಗೆ ಇನ್ನಷ್ಟು ಹೊಸ ರೂಪ ಕೊಡಲು ನಿರ್ಧರಿಸಿದ್ದೇವೆ. ಮೆರವಣಿಗೆಯಲ್ಲಿ ಕಂಸಾಳೆ, ಡೊಳ್ಳು ಸೇರಿದಂತೆ ಒಂದು ಕಲೆ ಪ್ರದರ್ಶನಕ್ಕೆ ಒಂದೇ ತಂಡಕ್ಕೆ ಅವಕಾಶ ನೀಡಲಾಗುವುದು. ಇದರಿಂದ ಎಲ್ಲ ಕಲೆಗಳಿಗೂ ಅವಕಾಶ ಸಿಗಲಿದೆ ಎಂದು ಹೇಳಿದರು.

ಪೊಲೀಸ್ ಬ್ಯಾಂಡ್ ಕಾರ್ಯಕ್ರಮಕ್ಕೂ ಹೊಸ ಸ್ಪರ್ಶ ನೀಡಲಾಗಿದೆ. 10 ಕೋಟಿಗೂ ಅಧಿಕ ವೆಚ್ಚದಲ್ಲಿ ಸೆಸ್ಕ್ ವತಿಯಿಂದ ದೀಪಾಲಂಕಾರ ಇರಲಿದೆ.

ಕಂಬಳ ಕೂಡ ನಮ್ಮ ರಾಜ್ಯದ ಒಂದು ಕ್ರೀಡೆ. ಅದಕ್ಕೆ ವಿರೋಧ ಸರಿಯಲ್ಲ. ಅದರಿಂದ ಯಾವ ಪರಿಸರ ನಾಶ, ನೀರು ಪೋಲು ಆಗುವುದಿಲ್ಲ ಎಂದರು.

ಚಲನಚಿತ್ರೋತ್ಸವದಲ್ಲಿ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷೆ ಜಯಮಾಲಾ ನೇತೃತ್ವದಲ್ಲಿ ನಾಡಿನ ಎಲ್ಲ ಖ್ಯಾತ ನಟ, ನಟಿಯರು ಪಾಲ್ಗೊಳ್ಳಲಿದ್ದಾರೆ. ಮೆರವಣಿಗೆಯಲ್ಲೂ ಅವರದ್ದೇ ಪ್ರತ್ಯೇಕ ಸ್ತಬ್ಧಚಿತ್ರ ಇರಲಿದೆ ಎಂದರು.

ಗ್ರೇಟರ್ ಮೈಸೂರುಗೆ ಚಿಂತನೆ

ಮೈಸೂರು: ಕಾವೇರಿ ಸಮಸ್ಯೆ ಕಾರಣಕ್ಕೆ ಗ್ರೇಟರ್ ಮೈಸೂರು ಕಡೆ ಗಮನ ಹರಿಸಲಿಲ್ಲ. ಮೈಸೂರು ಬಹಳ ಅಚ್ಚುಕಟ್ಟಾದ ನಗರ. ಇದನ್ನು ಕಾಪಾಡುವುದು ನಮ್ಮ ಜವಾಬ್ದಾರಿ. ಭವಿಷ್ಯದ ದೃಷ್ಟಿಯಿಂದ ಮೈಸೂರಿಗಾಗಿ ಹಲವು ಯೋಜನೆಗಳನ್ನ ಚಿಂತನೆ ಮಾಡಿದ್ದೇನೆ. ಸಿದ್ದರಾಮಯ್ಯ ಗ್ರೇಟರ್ ಮೈಸೂರು ಬಗ್ಗೆ ಭರವಸೆ ಕೊಟ್ಟಿದ್ದರು. ಅದನ್ನು ಈಡೇರಿಸುವುದು ನನ್ನ ಜವಾಬ್ದಾರಿ. ಕೆಲವು ದಿನಗಳಲ್ಲೇ ಈ ಭಾಗದ ಅಧಿಕಾರಿಗಳ ಪುಟ 2ಕ್ಕೆ

ರಾಜ್ಯದಲ್ಲಿ ಮತಗಳಿಂದ ಶಿಕ್ಷಣ ಕ್ರಾಂತಿ

ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಜಯಂತಿಯಲ್ಲಿ ಸಿಎಂ ಡಿಕೆಶಿ ಹೇಳಿಕೆ

ಮೈಸೂರು: ರಾಜ್ಯದಲ್ಲಿ ಶಿಕ್ಷಣದ ಕ್ರಾಂತಿ ನಡೆದಿರುವುದು ಮಠ ಮಾನ್ಯಗಳಿಂದ ಮಾತ್ರ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಮೈಸೂರಿನ ಸುತ್ತೂರು ಶಾಖಾ ಮಠದಲ್ಲಿ ನಡೆದ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ 111ನೇ ಜಯಂತಿ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾನು ಸಿಎಂ ಆದ ಮೇಲೆ ಮೈಸೂರಿನಲ್ಲಿ ಇದು ಎರಡನೇ ಕಾರ್ಯಕ್ರಮ. ಇದು ಭಾಗ್ಯ ಇದು ಭಾಗ್ಯ ಇದು ಭಾಗ್ಯವಯ್ಯ ಎಂಬ ಪುರಂದರದಾಸರ ವಾಣಿಯಿದೆ. ಅಂತಹದೇ

ಕೆಲಸ ಮಾಡಿದ್ದು ರಾಜೇಂದ್ರ ಶ್ರೀಗಳು ಅಕ್ಷರ ದಾಸೋಹ, ಅನ್ನ ದಾಸೋಹ ನೀಡಿದ್ದಾರೆ ಎಂದು ಹೇಳಿದರು.

ಕಳೆದ 40 ವರ್ಷಗಳಿಂದ ಈಗಿನ ಶ್ರೀಗಳು ಮಠವನ್ನು ಮುನ್ನಡೆಸುತ್ತಿದ್ದಾರೆ. ಗುರುಗಳಿಲ್ಲದೆ, ಮಠಗಳಿಲ್ಲದೆ ನಾವ್ಯಾರು ಇಲ್ಲ. ಹೊಟ್ಟೆಗೆ ಹಸಿವಾದರೆ ಪ್ರಸಾದ ಬೇಕು. ಮನಸ್ಸಿಗೆ ಹಸಿವಾದರೆ ಪ್ರಾರ್ಥನೆ ಬೇಕು. ಇದೇ ಕೆಲಸವನ್ನು ನಾವೆಲ್ಲ ಮಾಡುತ್ತಿದ್ದೇವೆ. ಕರ್ಮ ಹಲವಾದರೂ ನಿಷ್ಠೆ ಒಂದೇ. ದೇವನೊಬ್ಬ ನಾಮ ಹಲವು. ಪುಟ 2ಕ್ಕೆ

ಪತ್ನಿ ಫೋನ್ ಟ್ಯಾಪಿಂಗ್ ಮಾಡಿಸಿದ್ದ ಕುಮಾರಸ್ವಾಮಿ!

ಎಚ್‌ಡಿಕೆ ವಿರುದ್ಧ ಏಕವಚನದಲ್ಲಿ ಬಾಲಕೃಷ್ಣ ವಾಗ್ದಾಳಿ

ರಾಮನಗರ: ಸ್ವತಃ ತಮ್ಮ ಹೆಂಡತಿಯ ಫೋನ್ ಟ್ಯಾಪಿಂಗ್ ಮಾಡಿಸಿದ್ದವರು ನನ್ನ ಮೇಲೆ ಆರೋಪ ಮಾಡ್ತಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಸಚಿವ ಎಚ್.ಸಿ.ಬಾಲಕೃಷ್ಣ ವಾಗ್ದಾಳಿ ನಡೆಸಿದರು.

ಮಾಧ್ಯಮಗಳ ಜೊತೆ ಶನಿವಾರ ಮಾತನಾಡಿದ ಅವರು, ಸ್ವತಃ ತಮ್ಮ ಧರ್ಮಪತ್ನಿಯ ಫೋನ್ ಟ್ಯಾಪಿಂಗ್ ಮಾಡಿದಂತಹ ವ್ಯಕ್ತಿ ಎಚ್.ಡಿ.ಕುಮಾರಸ್ವಾಮಿ. ಅಲ್ಲದೇ ತಮ್ಮ ಪಿಎಗಳ ಮೇಲೂ ಫೋನ್ ಟ್ಯಾಪಿಂಗ್ ಮಾಡಿಸಿದ್ದಾರೆ.

ನಿನಗೆ ನಿನ್ನ ಹೆಂಡತಿ ಮೇಲೆ ನಂಬಿಕೆ ಇಲ್ಲ. ಇನ್ನೂ ಸಮಾಜವನ್ನು ಹೇಗೆ ನಂಬ್ತೀರಿ ಎಂದು ಸಚಿವ ಬಾಲಕೃಷ್ಣ ಪುಟ 2ಕ್ಕೆ

'ಚುಂಚಶ್ರೀ ವಿರುದ್ಧವೂ ಸಂಚು'

ನಮ್ಮ ಆದಿಚುಂಚನಗಿರಿ ಸ್ವಾಮೀ

ಮಾಠ, ಮಾನ್ಯಗಳಿಂದ ಮಾತ್ರ ಶಿಕ್ಷಣಕ್ರಾಂತಿ

ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಜಯಂತಿಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

ಮೈಸೂರು: ದುಃಖವನ್ನು ಕಳೆದುಕೊಳ್ಳಲು ನಾವು ಧರ್ಮದ ದಾರಿಯನ್ನು ಹುಡುಕಿ ಹೋಗುತ್ತೇವೆ. ಕಷ್ಟಗಳನ್ನು ಆಲಿಸಲು ಮಠಗಳು ದಾರಿದೀಪವಾಗಿವೆ. ಜಾತಿ ಭೇದ ಮರೆತು ಎಲ್ಲರೂ ಮಠಕ್ಕೆ ಬರುತ್ತಾರೆ. ರಾಜ್ಯದಲ್ಲಿ ಶಿಕ್ಷಣದ ಕ್ರಾಂತಿ ನಡೆದಿದೆ ಎಂದರೆ ಅದಕ್ಕೆ ಮಠ ಮಾನ್ಯಗಳೇ ಪ್ರಮುಖ ಕಾರಣ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಮೈಸೂರಿನ ಸುತ್ತೂರು ಶಾಖಾ ಮಠದಲ್ಲಿ ನಡೆದ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ 111ನೇ ಜಯಂತಿ ಮಹೋತ್ಸವದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ತಾವು ಮುಖ್ಯಮಂತ್ರಿಯಾದ ಮೇಲೆ ಮೈಸೂರಿನಲ್ಲಿ ನಡೆಯುತ್ತಿರುವ ಎರಡನೇ ಕಾರ್ಯಕ್ರಮ ಇದಾಗಿದೆ. ಪುರಂದರದಾಸರ 'ಇದು ಭಾಗ್ಯವಯ್ಯ' ವಾಣಿಯಂತೆ ರಾಜೇಂದ್ರ ಶ್ರೀಗಳು ಅಕ್ಷರ ಹಾಗೂ ಅನ್ನ ದಾಸೋಹವನ್ನು ನೀಡಿದ್ದಾರೆ. ಇಂತಹ ಮಹನೀಯರ ಜಯಂತಿಯಲ್ಲಿ ಭಾಗಿಯಾಗಿರುವುದು ತಮ್ಮ ಭಾಗ್ಯ ಎಂದ ಅವರು, ಕರ್ನಾಟಕದಲ್ಲಿ ಸರ್ಕಾರಕ್ಕಿಂತಲೂ ಮಠ-ಮಾನ್ಯಗಳು ಮತ್ತು ಖಾಸಗಿ ಸಂಸ್ಥೆಗಳು ಬೃಹತ್ ಶೈಕ್ಷಣಿಕ ಸಂಪತ್ತನ್ನು ಸೃಷ್ಟಿಸಿವೆ. ರಾಜ್ಯದ 46,302 ಸರ್ಕಾರಿ ಶಾಲೆಗಳಲ್ಲಿ 36 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರೆ, 24,000 ಖಾಸಗಿ ಹಾಗೂ ಮಠಗಳ ಶಾಲೆಗಳಲ್ಲಿ 57 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಇಂತಹ ಸಂಸ್ಥೆಗಳಿಗೆ ಸದಾ ಬೆಂಬಲ ನೀಡುವುದು ಸರ್ಕಾರದ ಕರ್ತವ್ಯ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಮತ್ತು ನಾಯಕತ್ವದ ಜವಾಬ್ದಾರಿ

ಮನುಷ್ಯನು ತಂದೆ, ತಾಯಿ, ಗುರುಗಳು ಹಾಗೂ ಸಮಾಜದ ಋಣದಲ್ಲಿ ಹುಟ್ಟುತ್ತಾನೆ. ದೇವರು ವರವನ್ನೂ ಕೊಡಲ್ಲ, ಶಾಪವನ್ನೂ ಕೊಡಲ್ಲ, ಬದಲಾಗಿ ಅವಕಾಶ ಕೊಡುತ್ತಾನೆ. ಸಿಕ್ಕಿರುವ ಅವಕಾಶವನ್ನು ಬಳಸಿಕೊಂಡು ಸೇವೆಯ ಮೂಲಕ ಸಾಕ್ಷಿಗುಡ್ಡೆ ನಿರ್ಮಿಸಿ ಹೋಗುವುದಾಗಿ ಅವರು ತಿಳಿಸಿದರು. ತಾವು ಹಾಗೂ ಸಿದ್ದರಾಮಯ್ಯ ಸೇರಿ ಪಂಚ ಗ್ಯಾರಂಟಿಗಳನ್ನು ನೀಡಲು ತೀರ್ಮಾನಿಸಿ ಅದಕ್ಕಾಗಿ 50 ಸಾವಿರ ಕೋಟಿ ರೂ. ಮೀಸಲಿಟ್ಟಿದ್ದೇವೆ. ಶಕ್ತಿ ಯೋಜನೆ, ಉಚಿತ ವಿದ್ಯುತ್ ಸೇರಿದಂತೆ ಜನರಿಗಾಗಿ ಜಾರಿಗೊಳಿಸಿದ ಯೋಜನೆಗಳನ್ನು ವಿರೋಧ ಪಕ್ಷಗಳು ಟೀಕಿಸಿದವು. ಆದರೆ ಇದೀಗ ಬೇರೆ ರಾಜ್ಯದವರು ನಮ್ಮ ಮಾದರಿಯನ್ನು ಅನುಸರಿಸುತ್ತಿದ್ದಾರೆ. ಬಸವಣ್ಣನ ನಾಡಿನಲ್ಲಿ ನಾವು ನುಡಿದಂತೆ ನಡೆದಿದ್ದೇವೆ. ಅಧಿಕಾರ ಶಕ್ತಿಯ ಸಂಕೇತವಲ್ಲ, ಅದು ಜವಾಬ್ದಾರಿಯ ಸಂಕೇತ ಎಂಬುದೇ ತಮ್ಮ ನಂಬಿಕೆ ಎಂದು ನುಡಿದರು. ಕಾರ್ಯಕ್ರಮದಲ್ಲಿ ಸಿದ್ದಗಂಗಾ ಮಠದ ಸಿದ್ದಲಿಂಗ ಸ್ವಾಮೀಜಿ, ಅವಧೂತ ದತ್ತಪೀಠದ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ, ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಡಾ. ನಿಶ್ಚಲಾನಂದ ಸ್ವಾಮೀಜಿ, ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಶಾಸಕರಾದ ತನ್ವೀರ್ ಸೇಠ್, ಜಿ.ಟಿ. ದೇವೇಗೌಡ, ಟಿ.ಎಸ್. ಶ್ರೀವತ್ಸ, ಎ.ಆರ್. ಕೃಷ್ಣಮೂರ್ತಿ, ಅಶೋಕ್ ಪಟ್ಟಣ್, ಕೆ. ಹರೀ ಶ್ಗೌಡ, ಗಣೇಶ್ ಪ್ರಸಾದ್, ಜಿ.ಡಿ. ಹರೀಶ್ಗೌಡ, ದರ್ಶನ್ ಧ್ರುವನಾರಾಯಣ್, ಡಿ. ರವಿಶಂಕರ್ ಉಪಸ್ಥಿತರಿದ್ದರು. ಅಲ್ಲದೆ, ವಿಧಾನಪರಿಷತ್ ಸದಸ್ಯರಾದ ಕೆ. ವಿವೇಕಾನಂದ, ಡಾ. ಡಿ.ತಿಮ್ಮಯ್ಯ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್, ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತರೆಡ್ಡಿ ಹಾಗೂ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಜಾತಿವ್ಯವಸ್ಥೆ ಹೋಗಲಾಡಿಸಲು ಶ್ರಮಿಸಿದ ಶ್ರೀಗಳು

ಮೈಸೂರು: ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳು ಸಮಾಜದಲ್ಲಿ ಸುಧಾರಣೆ ತರಲು, ಜಾತಿ ವ್ಯವಸ್ಥೆ ಹೋಗಲಾಡಿಸುವ ಕೆಲಸವನ್ನು ಮಾಡಿದ್ದಾರೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಸುತ್ತೂರು ಶಾಖಾ ಮಠದಲ್ಲಿ ನಡೆದ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸುತ್ತೂರು ಮಠ ಶಿಕ್ಷಣಕ್ಕೆ ದಾಸೋಹಕ್ಕೆ ಹೆಸರುವಾಸಿಯಾಗಿದೆ. ನಾಲ್ಕು ವರ್ಣಗಳ ವ್ಯವಸ್ಥೆಯಿಂದ ದೇಶದಲ್ಲಿ ಅನೇಕರು ಶಿಕ್ಷಣ ವಂಚಿತರಾದರು. ಶೂದ್ರ ವರ್ಗ ಅಕ್ಷರ ಕಲಿಕೆಯಿಂದ ವಂಚಿತವಾಗಿತ್ತು. ಹಾಗಾಗಿ ಸಮಾಜದಲ್ಲಿ ಅಸಮಾನತೆ ನಿರ್ಮಾಣವಾಗಿತ್ತು. ಬಸವಣ್ಣನವರ ಕಾಲದಲ್ಲೂ ಕೂಡ ಅಸಮಾನತೆ ಇತ್ತು. ಅದರ ವಿರುದ್ಧ ಬಸವಣ್ಣ ಹೋರಾಟ ಮಾಡಿದರು. ಮಠ ಮಾನ್ಯಗಳು ಧಾರ್ಮಿಕವಾಗಿ ಕೆಲಸ ಮಾಡಿದರೇ ಸಾಲಲ್ಲ. ಸಮಾಜವನ್ನು ತಿದ್ದುವ ಕೆಲಸವನ್ನು ಮಾಡಬೇಕು. ಇದೇ ಕೆಲಸವನ್ನು ರಾಜೇಂದ್ರ ಸ್ವಾಮೀಜಿ ಮಾಡಿದರು. ಪ್ರತಿ ಹಳ್ಳಿಗೆ ಹೋಗಿ ಶಾಲೆ ತೆರೆಯುವ ಕೆಲಸ ಮಾಡಿದರು. ಆ ಮೂಲಕ ಸಮಾಜದಲ್ಲಿ ಸುಧಾರಣೆ ತರುವ ಕೆಲಸ ಮಾಡಿ ಜಾತಿ ವ್ಯವಸ್ಥೆ ಹೋಗಲಾಡಿಸುವ ಕೆಲಸ ಮಾಡಿದ್ದಾರೆ. ಜಾತಿ ವ್ಯವಸ್ಥೆ ನಿಂತ ನೀರು. ಎಲ್ಲಿವರೆಗೂ ಚಲನೆ ಇರಲ್ಲ ಅಲ್ಲಿವರೆಗೆ ಬದಲಾವಣೆ ಸಾಧ್ಯವಿಲ್ಲ. 12ನೇ ಶತಮಾನದಲ್ಲಿ ಬಸವಣ್ಣ ಜಾತಿ ವ್ಯವಸ್ಥೆ ವಿರುದ್ಧವೇ ಹೋರಾಟ ಮಾಡಿದರು. ಇವನಮ್ಮವ ಇವನಮ್ಮವ ಎನ್ನುವ ಬಸವಣ್ಣ ವಚನ ಎಲ್ಲರಿಗೂ ಬರಬೇಕು. ಇದಕ್ಕಾಗಿ ಶಿಕ್ಷಣ ಮುಖ್ಯ ಎಂದು ತಿಳಿಸಿದರು. ಇಂದಿಗೂ ಜಾತಿ ವ್ಯವಸ್ಥೆ ಹೆಚ್ಚಿದ್ದು, ಪಟ್ಟಭದ್ರ ಹಿತಾಸಕ್ತಿಗಳು ಜಾತಿ ಹೋಗಲು ಬಿಡುತ್ತಿಲ್ಲ. ಜಾತಿ ಜಾತಿ ಅಂತಾರೆ. ಇದು ಹೋಗಬೇಕು. ಇಲ್ಲವೆಂದರೇ ಅಸಮಾನತೆ ಹೋಗಲ್ಲ. ವಿದ್ಯಾವಂತರು ಕೂಡ ಕರ್ಮ ಸಿದ್ಧಾಂತ ನಂಬುತ್ತಾರೆ. ಬಸವಣ್ಣ ಅವರೇ ಕರ್ಮ ಸಿದ್ಧಾಂತ ತಿರಸ್ಕಾರ ಮಾಡಿದರು. ಹಣೆ ಬರಹ ಕರ್ಮ ಅಂತಾರೆ. ಇದು ಕರ್ಮ ಸಿದ್ಧಾಂತವೆಂದರು. ನಮ್ಮ ಮನೆಯಲ್ಲಿ 6 ಜನ ಮಕ್ಕಳು. ನಾನು ಓದಿ ವಿದ್ಯಾವಂತನಾದೆ. ಸಿಎಂ ಕೂಡ ಆದೆ. ಯಾವ ಜನ್ಮಗಳು ಇಲ್ಲ, ಕರ್ಮಗಳು ಇಲ್ಲ. ಯಾರು ಇದನ್ನು ನಂಬಬೇಡಿ. ಸಮಾಜ ಬದಲಾವಣೆ ಆಗಬೇಕು. ಸಮ ಸಮಾಜ ನಿರ್ಮಾಣ ಆಗಬೇಕು. ಆಗ ಶೋಷಣೆ ಆಗಲ್ಲ. ನಾವು ರಾಜೇಂದ್ರ ಸ್ವಾಮೀಜಿಗಳನ್ನು ನೆನೆಯಬೇಕು. ಶಿಕ್ಷಣಕ್ಕೆ ಒತ್ತು ಕೊಟ್ಟು ಲಕ್ಷಾಂತರ ಜನರಿಗೆ ವಿದ್ಯಾದಾನ ಮಾಡಿದ್ದಾರೆ. ವೈಜ್ಞಾನಿಕವಾಗಿ ವಿದ್ಯಾವಂತರು ಚಿಂತನೆ ಮಾಡಬೇಕು ಎಂದು ಹೇಳಿದರು.

ತೇಗದ ಸಿರಿ ಯೋಜನೆ

ಬಾಲಗಂಗಾಧರ ಸ್ವಾಮೀಜಿ ಎಸ್.ಎಂ.ಕೃಷ್ಣ ಸಿಎಂ ಆಗಿದ್ದಾಗ ಐದು ಕೋಟಿ ಸಸಿ ನೆಡುವ ಕಾರ್ಯಕ್ರಮ ರೂಪಿಸಿದ್ದರು. ಅದೇ ರೀತಿ ಸರ್ಕಾರಿ ರಸ್ತೆಗಳು, ರೈತರ ಜಮೀನು ಹಾದು ಹೋಗುವ ರಸ್ತೆಗಳಲ್ಲಿ ಪ್ರತಿ ವರ್ಷ ಒಂದು ಕೋಟಿ ತೇಗದ ಗಿಡ ನೆಡಲು ತೇಗದ ಸಿರಿ ಯೋಜನೆ ಜಾರಿಗೆ ತರಲು ಚಿಂತನೆ ಮಾಡಿ ಈಗಾಗಲೇ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿದ್ದೇನೆ. ರೈತರ ಜಮೀನಿನ ಪಕ್ಕ ಸರ್ಕಾರಿ ಜಾಗವಿದ್ದರೆ ತೇಗದ ಮರ ಹಾಕಿ ಬೆಳೆಯಲು ಯೋಜನೆ ರೂಪಿಸುತ್ತಿದ್ದೇನೆ. 25 ವರ್ಷದ ಬಳಿಕ ಮರದಲ್ಲಿ ಶೇ.70ರಷ್ಟು ರೈತರಿಗೆ ಶೇ.30ರಷ್ಟು ಸರ್ಕಾರಕ್ಕೆ ಕೊಡಬೇಕು. ರೈತರು ಮರಗಳನ್ನು ಸಂರಕ್ಷಣೆ ಮಾಡಬೇಕು. ಈ ಯೋಜನೆಯನ್ನು ಜಾರಿಗೆ ತರಲು ಶೀಘ್ರವೇ ತೀರ್ಮಾನ ಮಾಡಿದ್ದೇನೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಮೇಕೆದಾಟು ಯೋಜನೆ ಜಾರಿಗೆ ಬದ್ಧತೆ

ಮೇಕೆದಾಟು ಯೋಜನೆ ತಮ್ಮ ಕಾಲದಲ್ಲೇ ಆಗಲಿದೆ ಎಂದು ಸಿದ್ದಗಂಗಾ ಶ್ರೀಗಳು ಹೇಳಿದ್ದನ್ನು ಮುಖ್ಯಮಂತ್ರಿಗಳು ಇದೇ ವೇಳೆ ಸ್ಮರಿಸಿದರು. ಯೋಜನೆಗೆ ಬೇಕಾದ ಜಮೀನಿನ ಬಗ್ಗೆ ಈಗಾಗಲೇ ಪರಿಶೀಲನೆ ನಡೆಯುತ್ತಿದ್ದು, ವಿರೋಧ ಪಕ್ಷದ ಸಹಕಾರವನ್ನೂ ಕೋರಲಾಗಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಮುಂದೆಯೂ ದಕ್ಷಿಣ ಭಾರತದ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಈ ಬಗ್ಗೆ ಪ್ರಸ್ತಾಪ ಮಾಡಲಾಗಿದೆ. ಮೇಕೆದಾಟು ಯೋಜನೆಯ ವಿಚಾರದಲ್ಲಿ ಸುಪ್ರೀಂ ಕೋರ್ಟ್ ತಮ್ಮ ಪರ ತೀರ್ಪು ನೀಡಿದ್ದು, ವಾತಾವರಣ ಶಾಂತವಾದ ಮೇಲೆ ಮಾತುಕತೆ ನಡೆಸಿ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು. ತಾವು ಕೆಪಿಸಿಸಿ ಅಧ್ಯಕ್ಷನಾದ ಬಳಿಕ ಸಿದ್ದರಾಮಯ್ಯನವರ ಜೊತೆಗೂಡಿ 'ನಮ್ಮ ನೀರು ನಮ್ಮ ಹಕ್ಕು' ಪಾದಯಾತ್ರೆ ಕೈಗೊಳ್ಳುವ ಮುನ್ನ ಸುತ್ತೂರು ಶ್ರೀಗಳ ಆಶೀರ್ವಾದ ಪಡೆಯಲು ಬಂದಾಗ, ಶ್ರೀಗಳು ಸುಮಾರು 2,000 ಮಕ್ಕಳ ಕೈಯಿಂದ ಪ್ರಾರ್ಥನೆ ಮಾಡಿಸಿ ಆಶೀರ್ವದಿಸಿದ್ದರು. ಆ ಪ್ರಾರ್ಥನೆಯ ಬಲದಿಂದಲೇ ಹೋರಾಟ ಯಶಸ್ವಿಯಾಗಿದೆ ಎಂದರು.

ಪುಸ್ತಕ ಬಿಡುಗಡೆ

ಇದೇ ವೇಳೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಜೆಎಸ್ಎಸ್ ವಿಜ್ಞಾನ ವಾಹಿನಿಗೆ ಚಾಲನೆ ನೀಡಿದರು. ಪಶುಸಂಗೋಪನೆ ಸಚಿವ ಸಿ. ಪುಟ್ಟರಂಗಶೆಟ್ಟಿ ಅವರು 'ಮ್ಯಾನ್ ವಿತ್ ಡಿವೈನಿಟಿ ಪೂಜ್ಯ ರಾಜೇಂದ್ರ ಶ್ರೀ' ಕೃತಿಯನ್ನು ಬಿಡುಗಡೆ ಮಾಡಿದರು. ಜೊತೆಗೆ ರಾಜೇಂದ್ರ ನುಡಿನಮನ 2ನೇ ಆವೃತ್ತಿ, ನಮ್ಮೊಡನಿದ್ದ ದೈವ ಪೂಜ್ಯ ರಾಜೇಂದ್ರ ಶ್ರೀ, ಪ್ರಸಾದ ವಿಶೇಷ ಸಂಚಿಕೆ ಹಾಗೂ ಜೆಎಸ್ಎಸ್ ಮಾಸಪತ್ರಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಪಾದಯಾತ್ರೆ ಮುಂದುವರಿಯಲಿದೆ

ನಾಗೇಂದ್ರ ಕೂಡ ಪಾದಯಾತ್ರೆ ಮಾಡುತ್ತೇನೆ ಅಂತಿದ್ದಾರೆ. ಪಾದಯಾತ್ರೆ ಮಾಡುವ ಹಕ್ಕು ಎಲ್ಲರಿಗೂ ಇದೆ. ಅವರೂ ಮಾಡಲಿ ತಿರುಗೇಟು ನೀಡಿದರು.

'ಚುಂಚಶ್ರೀ ವಿರುದ್ಧವೂ ಸಂಚು'

ಮಾಡ್ತಾರೆ. ಇವರ ತರ ಹಲಾಲ್ ಕೋರ್ ರಾಜಕಾರಣ ಮಾಡೋ ಅಭ್ಯಾಸ ನನಗಿಲ್ಲ. ಗನ್ ತೋರಿಸೋದು, ಕತ್ತಿ ತೋರಿಸೋದು ನನ್ನ ರಾಜಕೀಯ ಜೀವನದಲ್ಲೇ ಇಲ್ಲ ಎಂದು ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಸಚಿವ ಎಚ್.ಸಿ.ಬಾಲಕೃಷ್ಣ ಕಿಡಿಕಾರಿದರು.

ಕಾಂಗ್ರೆಸ್‌ಗೆ ಮುಜುಗರ ಏಕೆ: ಡಿಕೆಶಿಗೆ ಎಚ್‌ಡಿಕೆ ಟಾಂಗ್

87 ಕೋಟಿ ಹಗರಣದ ಮುಜುಗರ ತಪ್ಪಿಸಲು ರಾಜೀನಾಮೆ ಕೊಟ್ಟಿದ್ದಾರೆಯೇ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಪ್ರಶ್ನಿಸಿದರು. ಮಂಡ್ಯದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನನ್ನ ಮೇಲೆ ಆರೋಪ ಇಲ್ವಾ ಎಂದು ನಾಗೇಂದ್ರ ಕೇಳಿದ್ದಾರೆ. ನನ್ನ ಮೇಲೆ ಇರೋದು ರಾಜಕೀಯ ಆರೋಪ. ನಾನು ದುಡ್ಡು ಹೊಡೆದಿದ್ದೇನೆ ಎಂದು ಎಲ್ಲೂ ಇಲ್ಲ. ನನ್ನ ಮೇಲಿರುವುದು 14 ವರ್ಷಗಳ ಹಿಂದಿನ ಆರೋಪ. ನಾನು ಎರಡು ಬಾರಿ ಸಿಎಂ ಆಗಿದ್ದಾಗ ಮುಚ್ಚಿ ಹಾಕಬಹುದಿತ್ತು. ಕುಮಾರಸ್ವಾಮಿ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಆರೋಪ ಮಾಡಿದವರು ತನಿಖೆ ನಡೆಸಲಿ ಎಂದು ಬಿಟ್ಟಿದ್ದೇನೆ ಎಂದು ತಿರುಗೇಟು ನೀಡಿದರು.

ಪತ್ನಿ ಫೋನ್ ಟ್ಯಾಪಿಂಗ್

ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ. ಅದೇನೋ ಗನ್ ವಿಚಾರ ಪ್ರಸ್ತಾಪ ಮಾಡಿದ್ದಾರೆ. ಅದು ಯಾವ ಗನ್ ಅವರಿಗೆ ತರಲು ಹೇಳಿ. ಒಂದು ನನಗೆ ಶೂಟ್ ಮಾಡ್ಲಿ, ಇಲ್ಲಾ ಅಂದ್ರೆ ಅವರೇ ಶೂಟ್ ಮಾಡಿಕೊಳ್ಳಲಿ. ಸುಮ್ನೆ ಹಿಟ್ ಅಂಡ್ ರನ್ ಕೇಸ್, ಉಡಾಫೆ ಮಾತು ನಡೆಯಲ್ಲ. ನನ್ನ ಹತ್ತಿರ ಗನ್ನೂ ಇಲ್ಲ, ಲೈಸೆನ್ಸೂ ಇಲ್ಲ. ಇಂತಹ ಆರೋಪ ಮಾಡೋಕೆ ನಿನಗೆ ನಾಚಿಕೆ ಆಗಬೇಕು. ಸಾಬೀತು ಮಾಡಿ ಇಲ್ಲ ಕ್ಷಮೆ ಕೇಳಿ ಎಂದು ಬಾಲಕೃಷ್ಣ ಆಕ್ರೋಶ ವ್ಯಕ್ತಪಡಿಸಿದರು. ಮಾಜಿ ನಾಯಕರು ಅಂತ ನಾನು ಗೌರವ ಕೊಡುತ್ತಿದ್ದೇನೆ. ನಾನು ಯಾರಿಗೂ ಹೆದರಲ್ಲ. ನನಗೆ ಕೋಪ ಬಂದರೆ ಯಾರನ್ನೂ ಕೇರ್ ಮಾಡಲ್ಲ. ನಾನೇನು ಸತ್ಯ ಹರಿಶ್ಚಂದ್ರ ಅಲ್ಲ. ಸಣ್ಣಪುಟ್ಟ ತಪ್ಪು ಮಾಡಿರಬಹುದು. ಆದರೆ ಸಾರ್ವಜನಿಕ ಜೀವನದಲ್ಲಿ ಗೌರವದ ನಡವಳಿಕೆ ಇಟ್ಟುಕೊಂಡಿದ್ದೇನೆ ಎಂದು ಎಚ್ಚರಿಕೆ ನೀಡಿದರು.

ಅರಮನೆಗೆ 'ಪಿಂಕ್‌ಲೈಟ್'

ಸ್ವಾವಲಂಬಿ ಜೀವನ ರೂಪಿಸಿಕೊಳ್ಳಲು ನೆರವಾಗಿರುವ ಗೃಹಲಕ್ಷ್ಮೀ ಯೋಜನೆ ಜಾರಿಗೆ ಬಂದು ಆ.30ಕ್ಕೆ ಮೂರು ವರ್ಷಗಳನ್ನು ಪೂರೈಸಲಿದೆ.

ಗೃಹಲಕ್ಷ್ಮೀ ಯೋಜನೆ ಮೂರು ವರ್ಷಗಳನ್ನು ಪೂರೈಸುತ್ತಿರುವ ಈ ಸುಸಂದರ್ಭದಲ್ಲಿ ಮಹಿಳೆಯರ ಹೆಮ್ಮೆಯ ಸಂಕೇತವೆಂದು ಗುರುತಿಸಿರುವ ಗುಲಾಬಿ ಬಣ್ಣದ ಬೆಳಕಿನ ವ್ಯವಸ್ಥೆಯನ್ನು ಮಾಡಲಾಗಿದೆ. ಇದುವರೆಗೂ ಈ ಯೋಜನೆ ಅಡಿ 1.20 ಕೋಟಿ ಫಲಾನುಭವಿಗಳ ಖಾತೆಗೆ 76,500 ಕೋಟಿ ರೂ.ಗೂ ಹೆಚ್ಚು ಹಣ ಪಾವತಿಸಲಾಗಿದೆ.

ಮಠಗಳಿಂದ ಶಿಕ್ಷಣ ಕ್ರಾಂತಿ

ಮನಸ್ಸಿಗೆ ನೆಮ್ಮದಿ ಬೇಕು ಅಂದರೆ ದೇವರಿಗೆ ಪ್ರಾರ್ಥನೆ ಮಾಡುತ್ತೇವೆ. ಕಷ್ಟ ಅಂದಾಗ ದೇವಸ್ಥಾನಕ್ಕೆ ಹೋಗುತ್ತೇವೆ ಎಂದು ತಿಳಿಸಿದರು.

ಮೇಕೆದಾಟು ನಿಮ್ಮ ಕಾಲದಲ್ಲೇ ಆದರೆ, ಆಗತ್ತದೆ. ಇಲ್ಲ ಅಂದರೇ ಆಗಲ್ಲ ಅಂತ ಸಿದ್ದಗಂಗಾ ಶ್ರೀಗಳು ಹೇಳಿದರು. ಮೇಕೆದಾಟು ಯೋಜನೆಗೆ ಬೇಕಾದ ಜಮೀನು ಬಗ್ಗೆ ಈಗಾಗಲೇ ಪರಿಶೀಲನೆ ನಡೆಯುತ್ತಿದೆ. ವಿರೋಧ ಪಕ್ಷದ ಸಹಕಾರ ಕೂಡ ಕೇಳಿದ್ದೇನೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಮುಂದೇನೂ ಕೂಡ ಮೇಕೆದಾಟು ಯೋಜನೆಗೆ ಪ್ರಸ್ತಾಪ ಮಾಡಿದ್ದೇನೆ ಎಂದು ಸಿಎಂ ತಿಳಿಸಿದರು.

ತನಿಖೆ ಆರಂಭಿಸಿದ ಸಿಐಡಿ

ಹೊನ್ನಪ್ಪ ನೇತೃತ್ವದಲ್ಲಿ ಸಿಐಡಿಯ ನಾಲ್ಕು ತಂಡಗಳು ತನಿಖೆ ಕೈಗೊಳ್ಳಲಿವೆ.

ಗ್ರೇಟರ್ ಮೈಸೂರುಗೆ ಚಿಂತನೆ

ಹಾಗೂ ಜನಪ್ರತಿನಿಧಿಗಳ ಸಭೆ ಕರೆದು ಚರ್ಚೆ ಮಾಡುತ್ತೇನೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ವಿಶ್ವಾಸಾರ್ಹತೆ ಹೆಚ್ಚಿಸಿಕೊಳ್ಳಲು ಕರೆ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಕಿವಿಮಾತು

ಮೈಸೂರು: ಈಚಿನ ದಿನಗಳಲ್ಲಿ ಪತ್ರಿಕೋದ್ಯಮ ಜನರ ವಿಶ್ವಾಸ ಕಳೆದುಕೊಳ್ಳುತ್ತಿದೆ ಎಂಬುದಕ್ಕೆ ಉದಾಹರಣೆ ಈಚೆಗೆ ಜಂತರ್ ಮಂತರ್‌ನಲ್ಲಿ ನಡೆದ ಝೀನ್ ಝೀ ಪ್ರತಿಭಟನೆ ವೇಳೆ ಪ್ರಮುಖ ಮಾಧ್ಯಮಗಳಿಗೆ ವಿದ್ಯಾರ್ಥಿ ಗಳು ಪ್ರವೇಶ ನೀಡದಿದ್ದುದೇ ಉದಾಹರಣೆಯಾಗಿದೆ. ಹೀಗಾಗಿ ಪತ್ರಕರ್ತರ ಸಮಾಜದಲ್ಲಿ ವಿಶ್ವಾಸಾರ್ಹತೆ ಹೆಚ್ಚಿಸಿಕೊಳ್ಳುವುದಕ್ಕೆ ಹೆಚ್ಚಿನ ಗಮನ ನೀಡಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಕಿವಿಮಾತು ಹೇಳಿದರು.

ನಗರದ ಕೆಎನ್‌ಎಸ್ ಬಡಾವಣೆ ನಿವೇಶನದಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ನೂತನ ಭವನ ಶಿಲಾನ್ಯಾಸ ಹಾಗೂ ಪತ್ರಿಕಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ದೇಶದಲ್ಲಿನ ಮಾಧ್ಯಮಗಳ ಪರಿಸ್ಥಿತಿ ಸವಾಲಿನ ದಾಗಿದೆ. ಹಲವಾರು ಮಾಧ್ಯಮ ನಿಸ್ಪಕ್ಷಪಾತವಾಗಿ ವರದಿ ಮಾಡುತ್ತಿಲ್ಲ ಎಂಬ ಕಾರಣ ಝೀನ್ ಝೀಗಳು ನೀಡಿದರು. ಆದ್ದರಿಂದ ವಿಶ್ವಾಸಾರ್ಹತೆ ಗಳಿಸಿಕೊಳ್ಳುವತ್ತ ಗಮನ ಹರಿಸಬೇಕು. ಜನಪರವಾಗಿ, ವಸ್ತು ನಿಷ್ಠವಾಗಿ ಕೆಲಸ ಮಾಡಬೇಕಾದ ಅಗತ್ಯವಿದೆ ಎಂದರು.

ಇದೇ ವೇಳೆ, ದೇಶದ ಪ್ರಜಾಪ್ರಭುತ್ವವನ್ನು ಹಂತ ಹಂತವಾಗಿ ಮುಗಿಸುವ ಸಂಚು ನಡೆಯುತ್ತಿದೆ. ಆದ್ದರಿಂದ ಪ್ರಜಾಪ್ರಭುತ್ವ ಉಳಿಸಿಕೊಳ್ಳುವ ನಿಟ್ಟ

ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು

ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು

ಆಕೆ ನಮ್ಮ ಕನಸುಗಳನ್ನು ಸಾಕಾರಗೊಳಿಸುತ್ತಾಳೆ
ಆಕೆ ನಮ್ಮ ಭವಿಷ್ಯವನ್ನು ರೂಪಿಸುತ್ತಾಳೆ

ಪ್ರತಿ ಕುಟುಂಬದ ಯಜಮಾನಿಯ ಕೈ ಸೇರುವ ರೂ. 2000 ಹಣವು ಕುಟುಂಬದ ಹಲವು ಕನಸುಗಳನ್ನು ಈಡೇರಿಸಲು ಸಹಕಾರಿಯಾಗಿದೆ.

ಇವು ಗೃಹಲಕ್ಷ್ಮಿಯರ ಕಥೆಗಳು

₹76,500+ ಕೋಟಿ ವಿತರಿಸಲಾಗಿದೆ

ಗೃಹಲಕ್ಷ್ಮಿ

1.2+ ಕೋಟಿ ಫಲಾನುಭವಿಗಳು

ಗ್ಯಾರಂಟಿ ಸರ್ಕಾರ

ಶಕ್ತಿ | ಅನ್ನಭಾಗ್ಯ | ಗೃಹ ಜ್ಯೋತಿ | ಯುವನಿಧಿ

ಸ್ಕ್ಯಾನ್ ಮಾಡಿ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆ

ಚಾಮರಾಜನಗರ, ಮತದಾರರ ಪಟ್ಟಿ ವೀಕ್ಷಕರು ಹಾಗೂ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಆರ್. ವಿನೋತ್ ಪ್ರಿಯ ಅವರು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ನೋಂದಾಯಿತ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಕೈಗೊಳ್ಳಲಾಗಿರುವ ಪ್ರಕ್ರಿಯೆ ಕುರಿತು ಚರ್ಚಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪೂರ್ವದಲ್ಲಿ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿದ್ದ ಮತದಾರರ ವಿವರ, ಮತದಾರರಿಗೆ ವಿತರಿಸಲಾಗಿದ್ದ ಗಣತಿ ನಮೂನೆ, ಭರ್ತಿ ಮಾಡಿರುವ ಗಣತಿ ನಮೂನೆಗಳ ಸ್ವೀಕಾರ, ಗಣಕೀಕರಣ ವಿವರಗಳನ್ನು ಪರಿಶೀಲಿಸಿದರು. ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿಯಲ್ಲಿನ ಮತದಾರರ ವಿವರ ಹಾಗೂ ಪಟ್ಟಿ ಪ್ರಕಟಣೆ ನಂತರ ಕೈಗೊಳ್ಳಲಾಗಿರುವ ಪ್ರಕ್ರಿಯೆಗಳ ಕುರಿತು ಪರಾಮರ್ಶಿಸಿದರು.

ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಲ್ಲಿನ ಒಟ್ಟು 983 ಮತಗಟ್ಟೆಗಳ ಪೈಕಿ 1200ಕ್ಕಿಂತ ಹೆಚ್ಚು ಮತದಾರರಿರುವ ಮತಗಟ್ಟೆಗಳ ಪುನರ್ ವಿಂಗಡಣೆ ನಡೆಸಿ, ಮತದಾರರನ್ನು ವಿಂಗಡಿಸಿ ಹೊಸದಾಗಿ 47 ಮತ ಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಇದರಿಂದ 1030 ಒಟ್ಟು ಮತಗಟ್ಟೆಗಳಿವೆ ಎಂದು ಮತದಾರರ ಪಟ್ಟಿ ವೀಕ್ಷಕರು ತಿಳಿಸಿದರು. ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಆಕ್ಷೇಪಣೆಗಳನ್ನು ಆಗಸ್ಟ್ 24 ರಿಂದ ಸೆಪ್ಟೆಂಬರ್ 23ರ ವರೆಗೆ ಸಲ್ಲಿಸಲು ಅವಕಾಶವಿದೆ. ಈ ಅವಧಿಯಲ್ಲಿ ಸ್ವೀಕೃತ ವಾಗುವ ಹಕ್ಕು ಆಕ್ಷೇಪನೆಗಳನ್ನು ಆಗಸ್ಟ್ 24 ರಿಂದ ಅಕ್ಟೋಬರ್ 22ರವರೆಗೆ ಸಂಬಂಧಿಸಿದ ಮತದಾರರ ನೋಂದಣಾಧಿಕಾರಿಗಳು ಇತ್ಯರ್ಥಪಡಿಸಲಿದ್ದಾರೆ ಎಂದರು.

ಅರ್ಹ ಮತದಾರರ ಹೆಸರು ಕರಡು ಮತದಾರರ ಪಟ್ಟಿಯಲ್ಲಿ ಕೈಬಿಟ್ಟು ಹೋಗಿದ್ದರೆ ಸಂಬಂಧಿಸಿದ ಮತ ದಾರರು ನಮೂನೆ 6ರ ಅರ್ಜಿಯ ಜೊತೆ ಘೋಷಣಾ ಪತ್ರ ಹಾಗೂ ಅಗತ್ಯ ದಾಖಲೆಗಳನ್ನು ನೀಡಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅವಕಾಶವಿರುತ್ತದೆ ಎಂದು ಮತದಾರರ ಪಟ್ಟಿ ವೀಕ್ಷಕರಾದ ಆರ್. ವಿನೋತ್ ಪ್ರಿಯ ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಎನ್. ನಾಗಯ್ಯ, ಎ.ಹೆಚ್. ನಸ್ರುಲ್ಲಾ ಖಾನ್, ಶಂಕುತಲಾ, ಹೆಚ್.ಎಸ್. ತೋಂಟದಾರ್ಯ ಸ್ವಾಮಿ, ಎಸ್. ಶಿವರುದ್ರಸ್ವಾಮಿ, ಮತದಾರರ ನೋಂದ ಣಾಧಿಕಾರಿಗಳಾದ ಡಾ. ಆರ್. ವಸುಂಧರ ಹೆಗಡೆ, ಎನ್. ವಿಶ್ವನಾಥ್, ಸಹಾಯಕ ಮತದಾರರ ನೋಂದ ಣಾಧಿಕಾ ರಿಗಳು ಹಾಗೂ ತಹಶೀಲ್ದಾರರಾದ ಐ.ಇ. ಬಸವರಾಜು, ಕೆ.ಎನ್. ಚೈತ್ರ, ಎಸ್.ಎನ್ ನಯನ, ಬಿ. ಗಿರಿಜ, ತನ್ಮಯ್, ಅಧಿಕಾರಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೂ ಅವಕಾಶ ಕೊಡಿ

ಚಾಮರಾಜನಗರ: ರಾಜ್ಯ ಸರ್ಕಾರದ ಶಿಕ್ಷಣ ಇಲಾಖೆಯು ನಡೆಸಲಾಗುತ್ತಿರುವ 15 ಸಾವಿರ ಶಿಕ್ಷಕರ ನೇಮಕಾತಿಯಲ್ಲಿ ಬಿ.ಇಡಿ., ಅಂತಿಮ ಸೆಮಿಸ್ಟರ್ (4ನೇ ಸೆಮಿಸ್ಟರ್) ವಿದ್ಯಾರ್ಥಿಗಳಿಗೂ ಸಹ ಅವಕಾಶ ಕಲ್ಪಿಸಿಕೊಡುವಂತೆ ನಗರದ ಜಿಲ್ಲಾಡಳಿತ ಭವನದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರ ಮುಖಾಂತರ ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ವತಿಯಿಂದ ಮುಖ್ಯಮಂತ್ರಿಗಳಿಗೆ , ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ಸರ್ಕಾರದ ಶಿಕ್ಷಣ ಇಲಾಖೆಯು ಈ ಸಾರಿ 15 ಸಾವಿರ ಶಿಕ್ಷಕರನ್ನು ನೇಮಕಾತಿ ಮಾಡುತ್ತಿರುವುದು ಅತ್ಯಂತ ಸಂತೋಷದ ವಿಚಾರವಾಗಿದೆ. ಬಹಳ ವರ್ಷಗಳಿಂದ ಈ ಹಿಂದಿನ ಸರ್ಕಾರಗಳು ಮಾಡಲಾಗದಂತಹ ಶಿಕ್ಷಕರ ನೇಮಕಾತಿಯನ್ನು ತಾವು ಮಾಡಲು ಹೊರಟಿರುವ ನಿಮ್ಮ ಘನ ಸರ್ಕಾರಕ್ಕೆ ಅಭಿನಂದನೆಗಳು. ಅದರಂತೆಯೆ ಈಗಾಗಲೇ ಇದಕ್ಕೆ ಸಂಬಂಧಪಟ್ಟ ಶಿಕ್ಷಕರ ನೇಮಕಾತಿಗಳ ಅರ್ಜಿಯನ್ನು ತಾವು ಈಗಾಗಲೇ ಕರೆದಿದ್ದು ಇದಕ್ಕೆ ಪೂರಕವಾಗಿ ಪರೀಕ್ಷೆಗಳನ್ನು ತಾವು ನಡೆಸಲು ಉದ್ದೇಶಿಸಿರುತ್ತೀರಿ. ಈ ಸಂದರ್ಭದಲ್ಲಿ ರಾಜ್ಯದಲ್ಲಿ ಬಹಳಷ್ಟು ಜನ ವಿದ್ಯಾರ್ಥಿಗಳು ಬಿ.ಇಡಿ. ಅಂತಿಮ ಸೆಮಿಸ್ಟರ್ (4ನೇ ಸೆಮಿಸ್ಟರ್ನಲ್ಲಿ ವಿದ್ಯಾಭ್ಯಾಸ ನಡೆಸುತ್ತಿದ್ದಾರೆ. ಈ ತಿಂಗಳ ನವೆಂಬರ್ನಲ್ಲಿ ಈ ನಾಲ್ಕನೇ ಸೆಮಿಸ್ಟರ್ನ ಬಿ.ಇಡಿ. ಪರೀಕ್ಷೆಯೂ ಸಹ ನಡೆಯುತ್ತಿದೆ. ಈ ಸಂದರ್ಭದಲ್ಲಿ ತಾವು ಈ ಅಂತಿಮ ಸೆಮಿಸ್ಟರ್ನಲ್ಲಿ ವ್ಯಾಸಂಗ ಮಾಡು ತ್ತಿರುವ ವಿದ್ಯಾರ್ಥಿ ಗಳಿಗೂ ಸಹ 15 ಸಾವಿರ ಶಿಕ್ಷಕರ ನೇಮಕಾತಿಯಲ್ಲಿ ಅವರು ಸಹ ಅರ್ಜಿಗಳನ್ನು ಹಾಕಲು ತಾವು ಅವಕಾಶ ಮಾಡಿಕೊಡಬೇಕು ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಶ್ರೀನಿವಾಸಗೌಡ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಪಣ್ಯದಹುಂಡಿ ರಾಜು, ನಿಜಧ್ವನಿ ಗೋವಿಂದರಾಜು, ಹೊಮ್ಮ ಲೋಕೇಶ್, ಜಗದೀಶ್, ಮಂಗಲದ ಹೊಸೂರು ಶಿವಣ್ಣ, ರಾಚಪ್ಪ, ಆಟೋ ಲಿಂಗರಾಜು, ಮುತ್ತು ಇತರರು ಹಾಜರಿದ್ದರು.

ಅರಣ್ಯ ಪ್ರದೇಶದಲ್ಲಿನ ರೈತರಿಗೆ ಸಾಗುವಳಿ ಪತ್ರ, ನಿರಪೇಕ್ಷಣಾ ಪತ್ರ, ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹ

ಅಹೋರಾತ್ರಿ ಧರಣಿ ಆರೆನೇ ದಿನಕ್ಕೆ

ಗುಂಡ್ಲುಪೇಟೆ: ಅರಣ್ಯ ಪ್ರದೇಶದಲ್ಲಿನ ರೈತರಿಗೆ ಸಾಗುವಳಿ ಪತ್ರ ಹಾಗೂ ನಿರಪೇಕ್ಷಣಾ ಪತ್ರ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಗುಂಡ್ಲುಪೇಟೆ ತಾಲೂಕು ಘಟಕದ ವತಿಯಿಂದ ತಾಲೂಕು ಕಚೇರಿ ಆವರಣದಲ್ಲಿ ಆರಂಭಿಸಿರುವ ಅಹೋರಾತ್ರಿ ಧರಣಿ ಶನಿವಾರಕ್ಕೆ ಆರೆನೇ ದಿನಕ್ಕೆ ಕಾಲಿಟ್ಟಿದೆ.

ಧರಣಿ ಸ್ಥಳದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಶಿವಪುರ ಮಹಾದೇವಪ್ಪ, ರೈತರ ಸಮ ಸ್ಯೆಗಳನ್ನು ಆಲಿಸಲು ಸ್ಥಳೀಯ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು, ತಾಲೂಕು ಆಡಳಿತ, ಜಿಲ್ಲಾಧಿಕಾರಿ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಯಾರೂ ಸ್ಥಳಕ್ಕೆ ಆಗಮಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕಿನ 37 ಸರ್ವೆ ನಂಬರ್ಗಳಲ್ಲಿರುವ ಡಿಮ್ಡ್ ಫಾರೆಸ್ಟ್ ಪ್ರದೇಶದ ರೈತರಿಗೆ ಸಾಗುವಳಿ ಪತ್ರ ಹಾಗೂ ನಿರಪೇ ಕ್ಷಣಾ ಪತ್ರ ನೀಡಬೇಕು. 1935ರಿಂದ 1992ರವರೆಗೆ ಸಾಗುವಳಿ ವಿತರಣೆ ಮಾಡಿರುವ 2,570 ಜನರಿಗೆ ಹಕ್ಕುಪತ್ರ ವಿತರಿಸುವ ವರೆಗೆ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

ಆ.31ರಿಂದ ಚಳುವಳಿಯನ್ನು ಹಂತ ಹಂತವಾಗಿ ತೀವ್ರಗೊಳಿಸಲಾಗುವುದು. ಮೊದಲ ಹಂತದಲ್ಲಿ ಮಕ್ಕಳ ಚಳುವಳಿ ನಡೆಸಲಾಗುವುದು. ರೈತರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಶ್ರಮಿಸುತ್ತಿದ್ದು, ಮಕ್ಕಳು ದೇಶದ ಮುಂದಿನ ಪ್ರಜೆಗಳಾಗಿದ್ದಾರೆ. ರೈತರ ಸಮಸ್ಯೆಗಳನ್ನು ಸರ್ಕಾರ ಗಂಭೀರ ವಾಗಿ ಪರಿಗಣಿಸಬೇಕು ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಪೂರಕೆ ಚಳುವಳಿ, ಬಾರುಕೋಲು ಚಳುವಳಿ, ಎತ್ತಿನಗಾಡಿ ಚಳುವಳಿ ಸೇರಿದಂತೆ ವಿವಿಧ ರೀತಿಯ ಹೋರಾಟಗಳನ್ನು ನಡೆಸಲಾಗುವುದು. ದನಕರುಗಳೊಂದಿಗೆ ಇಡೀ ರೈತ ಕುಟುಂಬವೇ ತಾಲೂಕು ಕಚೇರಿ ಆವರಣದಲ್ಲಿ ವಾಸ್ತವ್ಯ ಹೂಡುವ ಮೂಲಕ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಸಿದರು.

ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಹಾಗೂ ರಾಜ್ಯ ಸಮಿತಿ ಮುಖಂಡ ದರ್ಶನ್ ಪುಟ್ಟಣ್ಣಯ್ಯ ಸೇರಿದಂತೆ ರಾಜ್ಯ ಪದಾಧಿಕಾರಿಗಳು ಗುಂಡ್ಲುಪೇಟೆಗೆ ಆಗಮಿಸುವ ಸಂದರ್ಭದಲ್ಲಿ ಬೃಹತ್ ಟ್ರ್ಯಾಕ್ಟರ್ ರ?ಯಾಲಿ ನಡೆಸಲಾಗುವುದು. ತಾಲೂಕಿನ ವಿವಿಧ ಗ್ರಾಮ ಘಟಕಗಳಿಗೆ ಭೇಟಿ ನೀಡಿ ಕರಪತ್ರ ಹಂಚಿ ರೈತರನ್ನು ಚಳುವಳಿಗೆ ಆಹ್ವಾನಿಸಲಾಗುವುದು. ಬೇಡಿಕೆಗಳು ಈಡೇರದಿದ್ದರೆ ಮುಂದಿನ ಹಂತದಲ್ಲಿ ಕಾನೂನು ಭಂಗ ಚಳುವಳಿಗೂ ಮುಂದಾಗಲಾಗು ವುದು ಎಂದು ಮಹಾದೇವಪ್ಪ ತಿಳಿಸಿದರು.

ತಾಲೂಕು ಅಧ್ಯಕ್ಷ ಮಲ್ಲಯ್ಯನಪುರ ಶಿವಣ್ಣ ಮಾತನಾಡಿ, ಧರಣಿ ಆರಂಭವಾಗಿ ಆರು ದಿನ ಕಳೆದರೂ ಶಾಸಕರು ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ರೈತರ ಸಮಸ್ಯೆಗ ಳನ್ನು ಆಲಿಸಲು ಮುಂದಾಗದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿದರು. ಈ ಸಂದರ್ಭದಲ್ಲಿ ರೈತ ಸಂಘದ ಕಾರ್ಯಾಧ್ಯಕ್ಷ ಹಕ್ಕಲಪುರ ಕುಮಾರ್, ಜಿಲ್ಲಾ ಕಾಯಂ ಆಹ್ವಾನಿತ ಕೋಡಹಳ್ಳಿ ಸೋಮಶೇಖರ್, ತಾಲೂಕು ಗೌರವಾ ಧ್ಯಕ್ಷ ನಾಗರಾಜಪ್ಪ, ಪ್ರಧಾನ ಕಾರ್ಯದರ್ಶಿ ಕೋಡಹಳ್ಳಿ ಪ್ರಸಾದ್, ಮಹಿಳಾ ಘಟಕದ ಅಧ್ಯಕ್ಷೆ ಬಸಮ್ಮ, ಜಿಲ್ಲಾ ಸಂಘ ಟನಾ ಕಾರ್ಯದರ್ಶಿ ಮಹದೇವಸ್ವಾಮಿ, ತಾಲೂಕು ಉಪಾ ಧ್ಯಕ್ಷ ಪುಟ್ಟೇಗೌಡ, ಸಂಘಟನಾ ಕಾರ್ಯದರ್ಶಿ ರವಿಚಂದ್ರ, ಹನೂರು ತಾಲೂಕು ಅಧ್ಯಕ್ಷ ಪಳನಿಸ್ವಾಮಿ, ಮುಂಟೀಪುರ ಮಹದೇವಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕ್ರೀಡೆಯಿಂದ ಆರೋಗ್ಯಕರ ಜೀವನ

ಸಚಿವ ಪುಟ್ಟರಂಗಶೆಟ್ಟಿ ಹೇಳಿಕೆ । ತಾಲೂಕು ಮಟ್ಟದ ಕ್ರೀಡಾಕೂಟ

ಚಾಮರಾಜನಗರ: ಆರೋಗ್ಯಕರ ಬದುಕಿಗೆ ಕ್ರೀಡಾ ಚಟುವಟಿಕೆಗಳು ಬಹು ಮುಖ್ಯವಾಗಿದೆ ಎಂದು ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂ ಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಮರಿಯಾಲದ ಶ್ರೀ ಮುರುಘರಾಜೇಂದ್ರ ಸ್ವಾಮಿ ಸಂಯುಕ್ತ ಪದವಿ ಪೂರ್ವ ಕಾಲೇಜು ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಚಾಮರಾಜನಗರ ತಾಲೂಕು ಮಟ್ಟದ ಶಾಲಾ ಶಿಕ್ಷಣ (ಪದವಿ ಪೂರ್ವ) ಕಾಲೇಜುಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಲು ಕಿವಿಮಾತು

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ಯಾರಂಟಿ ಯೋಜ ನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು ಅವರು, ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ಅವಕಾಶ ಮಾಡಿ ಕೊಡಲು ಪ್ರೋತ್ಸಾಹ ನೀಡಬೇಕು. ಕ್ರೀಡಾ ಸ್ಪರ್ಧೆ ಗಳಲ್ಲಿ ವಿದ್ಯಾರ್ಥಿಗಳು ಸೋಲಿಗೆ ಧೃತಿಗೆಡಬಾರದು, ಗೆಲುವು ಹಾಗೂ ಸೋಲನ್ನು ಸಮಾನವಾಗಿ ಸ್ವೀಕರಿ ಸಬೇಕು ಎಂದರು. ಮರಿಯಾಲದ ಶ್ರೀ ಮುರುಘರಾ ಜೇಂದ್ರಸ್ವಾಮಿ ಮಹಾಸಂಸ್ಥಾನ ಮಠಾಧ್ಯಕ್ಷರು ಹಾಗೂ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಇಮ್ಮಡಿ ಮುರುಘರಾಜೇಂದ್ರಸ್ವಾಮಿ ಅವರು ಮಾತನಾಡಿ, ವಿದ್ಯಾರ್ಥಿಗಳ ಮಾನಸಿಕ ಹಾಗೂ ದೈಹಿಕ ಆರೋಗ್ಯ ಕಾಪಾಡಿಕೊಳ್ಳಲು ಕ್ರೀಡೆಯಿಂದ ಸಾಧ್ಯವಾಗಲಿದೆ. ಧ್ಯಾನ, ಯೋಗದಂತಹ ಆಧ್ಯಾತ್ಮಿಕ ಶಿಕ್ಷಣವು ಅಗತ್ಯವಾಗಿದ್ದು, ವಿದ್ಯಾರ್ಥಿಗಳಿಗೆ ಈ ಕ್ರೀಡಾಕೂಟ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಹೆಚ್. ಎನ್. ಪುಟ್ಟಗೌರಮ್ಮ, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ಪಿ. ಪ್ರಿಯಾ ಶಂಕರ್, ಖಜಾಂಚಿ ಹೆಚ್.ಎನ್ ಸ್ವಾಮಿ, ಮುರುಘರಾಜೇಂದ್ರಸ್ವಾಮಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪಿ. ಮಹದೇವಸ್ವಾಮಿ, ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಟಿ. ಮಧು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷರಾದ ನಾಗರಾಜು, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಬಸವರಾಜು, ದೈಹಿಕ ಶಿಕ್ಷಣ ಶಿಕ್ಷಕರಾದ ಚಿಕ್ಕಬಸವಯ್ಯ, ವಿಶ್ರಾಂತ ಪ್ರಾಂಶುಪಾಲರಾದ ಸೋಮಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕ್ರೀಡೆಗೆ ಆದ್ಯತೆ,ಮೂಲಸೌಕರ್ಯಗಳ ಅಭಿವೃದ್ಧಿ

ಜೀವನದಲ್ಲಿ ಎಷ್ಟೇ ಚಟುವಟಿಕೆಗಳಿದ್ದರೂ ಕ್ರೀಡಾ ಚಟುವಟಿಕೆ ಅತ್ಯಂತ ಅವಶ್ಯವಾಗಿದೆ. ಆರೋಗ್ಯ ಕರ ಜೀವನಕ್ಕೆ ಕ್ರೀಡೆ ಸಹಕಾರಿಯಾಗಲಿದ್ದು, ದೈಹಿಕವಾಗಿ ಸದೃಢರಾಗಲು ಕ್ರೀಡೆ, ಆಟೋಟ ಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಚಿವರು ಸಲಹೆ ಮಾಡಿದರು. ಕ್ರೀಡಾ ಆಸಕ್ತರಿಗೆ ಉತ್ತೇಜನ ನೀಡುವ ಸಲುವಾಗಿ ಇನ್ನಷ್ಟು ಕ್ರೀಡಾ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. 13 ಕೋಟಿ ರೂ. ವೆಚ್ಚದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿ ಹಾಗೂ ಈಜು ಕೊಳ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದೆ. ಲೋಕಸಭಾ ಸದಸ್ಯರಾಗಿದ್ದ ಧ್ರುವನಾರಾಯಣ್ ಅವರ ಅವಧಿಯಲ್ಲಿ ಸುಸಜ್ಜಿತ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣವಾಗಿದ್ದು, ಕ್ರೀಡಾ ಚಟುವಟಿ ಕೆಗಳಿಗೆ ಈ ಮೂಲಕ ಉತ್ತೇಜನ ನೀಡಲಾಗುತ್ತಿದೆ ಎಂದರು. ಪ್ರಸ್ತುತ ನಡೆಯುತ್ತಿರುವ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಾಧನೆ ಮಾಡಬೇಕು ಹಾಗೂ ರಾಜ್ಯ, ರಾಷ್ಟ್ರ ಮಟ್ಟದಲ್ಲಿಯೂ ಆಯ್ಕೆಯಾಗಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಸಚಿವರು ಹಾರೈಸಿದರು.

ಅರಮನೆಯಲ್ಲಿ ಗಜಪಡೆ ವೀಕ್ಷಣೆಗೆ ಮುಕ್ತ

ಮೈಸೂರು: 2026ರ ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ದಸರಾ ಗಜಪಡೆ ಆಗಸ್ಟ್ 28ರಿಂದ ಅರಮನೆ ಆವರಣದಲ್ಲಿರುವ ದಸರಾ ಆನೆಗಳ ಶಿಬಿರದಲ್ಲಿ ಬೀಡುಬಿಟ್ಟಿದೆ. ಈ ನಡುವೆ, ಅರಮನೆ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರಿಗೆ ದಸರಾ ಆನೆಗಳನ್ನು ವೀಕ್ಷಿಸಲು ಅರಣ್ಯ ಇಲಾಖೆ ವತಿಯಿಂದ ಇ-ಟಿಕೆಟಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂಬ ಮಾಹಿತಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ಈ ಕುರಿತು ಸ್ಪಷ್ಟನೆ ನೀಡಿರುವ ಮೈಸೂರು ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಆನೆಗಳ ವೀಕ್ಷಣೆಗೆ ಅರಣ್ಯ ಇಲಾಖೆ ಯಿಂದ ಯಾವುದೇ ಟಿಕೆಟ್ ನೀಡುತ್ತಿಲ್ಲ. ಆನೆಗಳ ವೀಕ್ಷಣೆಗೆ ಇ- ಟಿಕೆಟಿಂಗ್ ವ್ಯವಸ್ಥೆ ಕಲ್ಪಿಸುವ ವಿಚಾರ ಕೇವಲ ಚಿಂತನಾ ಹಂತದಲ್ಲಿದ್ದ ವ್ಯವಸ್ಥೆಯಾಗಿತ್ತು. ಅದನ್ನು ಜಾರಿಗೊಳಿಸಿಲ್ಲ ಎಂದು ಇಲಾಖೆ ಸ್ಪಷ್ಟಪಡಿ ಸಿದೆ. ಹೀಗಾಗಿ, ದಸರಾ ಆನೆಗಳ ವೀಕ್ಷಣೆಗೆ ಟಿಕೆಟ್ ನೀಡಲಾಗುತ್ತಿದೆ ಎಂಬ ಸಾಮಾಜಿಕ ಜಾಲತಾಣಗಳಲ್ಲಿನ ಮಾಹಿತಿಯನ್ನು ಸಾರ್ವಜನಿಕರು ನಂಬಬಾರದು ಎಂದು ಅರಣ್ಯ ಇಲಾಖೆ ತಿಳಿಸಿದೆ.

ಪಕ್ಷಕ್ಕೆ ಮುಜುಗರ ಆಗಬಾರದೆಂದು ನಾಗೇ

ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಪ್ರಯೋಜನ ತಲುಪಿಸಲು ಅಧಿಕಾರಿಗಳಿಗೆ ಸೂಚನೆ

ಸಂಸದರ ನಿಧಿ ಸಮರ್ಪಕವಾಗಿ ಬಳಕೆ ಮಾಡಿ: ಹೆಚ್.ಡಿ. ಕೆ

ಮಂಡ್ಯ:ಜಿಲ್ಲೆಯ ಅಭಿವೃದ್ಧಿಗೆ ಲಭ್ಯವಾಗುವ ಸಂಸದರ ನಿಧಿಯನ್ನು ಸಮರ್ಪಕವಾಗಿ ಹಾಗೂ ಆದ್ಯತೆಯ ಮೇರೆಗೆ ಬಳಸಿಕೊಳ್ಳಬೇಕು ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಸಚಿವ ಹಾಗೂ ಮಂಡ್ಯ ಸಂಸದರಾದ ಹೆಚ್.ಡಿ. ಕುಮಾರಸ್ವಾಮಿ ಶನಿವಾರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಇಲಾಖೆಗಳ ನಡುವೆ ಸಮನ್ವಯತೆ ಇರಬೇಕು. ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಪ್ರಯೋಜನ ತಲುಪುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದರು.

ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಬೇಕು

ಮಿಮ್ಸ್ ಆಸ್ಪತ್ರೆಗೆ ಚಿಕಿತ್ಸೆಗಾಗಿ ಆಗಮಿಸುವ ರೋಗಿಗಳನ್ನು ವೈದ್ಯರು ಹಾಗೂ ಸಿಬ್ಬಂದಿ ಸಮರ್ಪಕವಾಗಿ ನೋಡಿಕೊಳ್ಳುತ್ತಿಲ್ಲ ಎಂಬ ದೂರುಗಳು ಸಾರ್ವಜನಿಕರಿಂದ ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಯ ಹಾಜರಾತಿಯನ್ನು ಕಡ್ಡಾಯವಾಗಿ ಬಯೋಮೆಟ್ರಿಕ್ ವ್ಯವಸ್ಥೆಯ ಮೂಲಕ ದಾಖಲಿಸುವಂತೆ ಸೂಚಿಸಿದರು.

ವೈದ್ಯರು ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಿ, ರೋಗಿಗಳಿಗೆ ಸಮರ್ಪಕ ಹಾಗೂ ಗುಣಮಟ್ಟದ ವೈದ್ಯಕೀಯ ಸೇವೆ ಒದಗಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಗುಣಮಟ್ಟದಿಂದ ಕೂಡಿರಲಿ

ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆ ಕಾಮಗಾರಿಗಳನ್ನು ನಿಗದಿತ ಗುಣಮಟ್ಟ ಹಾಗೂ ಮಾನದಂಡಗಳಿಗೆ ಅನುಗುಣವಾಗಿ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಹೆದ್ದಾರಿಯಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಚಾರ ವ್ಯವಸ್ಥೆ, ಸರ್ವಿಸ್ ರಸ್ತೆ, ಚರಂಡಿ, ರಸ್ತೆ ಬದಿಯ ಸ್ವಚ್ಛತೆ ಹಾಗೂ ಸುರಕ್ಷತಾ ಕ್ರಮಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು.

ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಗುಣಮಟ್ಟದಿಂದ ಕೂಡಿರಲಿ

ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆ ಕಾಮಗಾರಿಗಳನ್ನು ನಿಗದಿತ ಗುಣಮಟ್ಟ ಹಾಗೂ ಮಾನದಂಡಗಳಿಗೆ ಅನುಗುಣವಾಗಿ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಹೆದ್ದಾರಿಯಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಚಾರ ವ್ಯವಸ್ಥೆ, ಸರ್ವಿಸ್ ರಸ್ತೆ, ಚರಂಡಿ, ರಸ್ತೆ ಬದಿಯ ಸ್ವಚ್ಛತೆ ಹಾಗೂ ಸುರಕ್ಷತಾ ಕ್ರಮಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು.

ರೈತರ ಸಾಲ ವಸೂಲಾತಿಗೆ ಅನಗತ್ಯ ಒತ್ತಡ ಬೇಡ

ಬೆಳೆ ನಷ್ಟ, ಮಳೆ ಕೊರತೆ ಹಾಗೂ ವಿವಿಧ ಕಾರಣಗಳಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ, ಸಾಲ ಮರುಪಾವತಿಗೆ ಸಂಬಂಧಿಸಿದಂತೆ ರೈತರ ಮೇಲೆ ಯಾವುದೇ ರೀತಿಯ ಅನಗತ್ಯ ಒತ್ತಡ ಹೇರಬಾರದು ಎಂದು ಬ್ಯಾಂಕ್‌ಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳಾದ ಡಾ ಕುಮಾರ ಅವರು ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ವಾಡಿಕೆಯಂತೆ ಮಳೆಯಾಗದ ಹಿನ್ನೆಲೆಯಲ್ಲಿ ನೀರಿನ ಲಭ್ಯತೆ ಕಡಿಮೆಯಾಗಿದ್ದು, ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಕಳೆದ 20 ವರ್ಷಗಳ ಮಳೆ ಪ್ರಮಾಣವನ್ನು ಪರಿಶೀಲಿಸಿದಾಗ ಹಲವು ವರ್ಷಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದು ಕಂಡುಬಂದಿದೆ. ಪ್ರಸಕ್ತ ವರ್ಷವೂ ಮಳೆ ಕೊರತೆ ಮುಂದುವರಿದಿರುವುದರಿಂದ ಜಲಾಶಯಗಳು, ಕೆರೆ–ಕಟ್ಟೆಗಳು ಹಾಗೂ ಇತರೆ ಜಲಮೂಲಗಳಲ್ಲಿ ನೀರಿನ ಸಂಗ್ರಹಣೆ ನಿರೀಕ್ಷಿತ ಮಟ್ಟದಲ್ಲಿಲ್ಲ.

ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಜನರು ಮತ್ತು ಜಾನುವಾರುಗಳಿಗೆ ಅಗತ್ಯ ಪ್ರಮಾಣದ ನೀರು ಲಭ್ಯವಾಗುವಂತೆ ಅಗತ್ಯ ಕ್ರಮವಹಿಸಲಾಗಿದೆ.

ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ರೈತರು ನೀರಿನ ಮಿತ ಬಳಕೆಗೆ ಮುಂದಾಗಬೇಕು. ಹೆಚ್ಚಿನ ಪ್ರಮಾಣದಲ್ಲಿ ನೀರು ಅಗತ್ಯವಿರುವ ಬೆಳೆಗಳ ವಿಸ್ತೀರ್ಣವನ್ನು ಸಾಧ್ಯವಾದಷ್ಟು ಕಡಿಮೆ ಮಾಡಿ, ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಬೆಳೆಗಳಿಗೆ ಆದ್ಯತೆ ನೀಡುವಂತೆ ರೈತರಿಗೆ ಜಾಗೃತಿ ಮೂಡಿಸಲಾಗಿದೆ.

ವಿಶೇಷವಾಗಿ ರಾಗಿ, ಜೋಳ, ಅಲಸಂದೆ, ಎಳ್ಳು, ಉದ್ದು ಸೇರಿದಂತೆ ಕಡಿಮೆ ನೀರಿನ ಅವಶ್ಯಕತೆ ಇರುವ ಬೆಳೆಗಳನ್ನು ಬೆಳೆಯಲು ರೈತರಿಗೆ ಸಲಹೆ ನೀಡಲಾಗಿದೆ. ನೀರಿನ ಲಭ್ಯತೆ ಮತ್ತು ಮಳೆ ಪರಿಸ್ಥಿತಿಯನ್ನು ಆಧರಿಸಿ ಬೆಳೆ ಆಯ್ಕೆ ಮಾಡುವಂತೆ ಕೃಷಿ ಇಲಾಖೆಯ ಅಧಿಕಾರಿಗಳು ರೈತರಿಗೆ ಸೂಕ್ತ ಮಾರ್ಗದರ್ಶನ ನೀಡಲಾಗಿದೆ.

ಹೇಮಾವತಿ ಜಲಾಶಯಕ್ಕೆ ಸಂಬಂಧಿಸಿದಂತೆ ಈಗಾಗಲೇ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆ ನಡೆಸಲಾಗಿದ್ದು, ಸಭೆಯಲ್ಲಿ ಶಾಸಕರು ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳು ಭಾಗವಹಿಸಿದ್ದರು.

ಜಲಾಶಯದಿಂದ ಈಗಾಗಲೇ ನಾಲೆಗಳಿಗೆ ನೀರು ಹರಿಸಲಾಗುತ್ತಿದ್ದು, ಕೆ.ಆರ್. ಪೇಟೆ ಹಾಗೂ ನಾಗಮಂಗಲ ಭಾಗಗಳಿಗೂ ನಾಲೆಗಳ ಮೂಲಕ ನೀರು ತಲುಪುತ್ತಿದೆ ಎಂದು ಜಿಲ್ಲಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೆ.ಆರ್. ಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಹೆಚ್.ಟಿ ಮಂಜು,ವಿಧಾನ ಪರಿಷತ್ ಶಾಸಕರಾದ , ಕೆ. ವಿವೇಕಾನಂದ, ದಿಶಾ ಸಮಿತಿ ಸದಸ್ಯರು ಹಾಗೂ ಮಾಜಿ ಶಾಸಕ ಕೆ ಅಂದಾನಿ,ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ. ಆರ್. ನಂದಿನಿ, ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಶೋಭಾರಾಣಿ ವಿ.ಜೆ ಸೇರಿದಂತೆ ದಿಶಾ ಸಮಿತಿ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಹೆಚ್.ಡಿ. ಕುಮಾರಸ್ವಾಮಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಇಲಾಖೆಗಳ ನಡುವೆ ಸಮನ್ವಯತೆ ಇರಬೇಕು. ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಪ್ರಯೋಜನ ತಲುಪುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದರು.

ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಬೇಕು

ಮಿಮ್ಸ್ ಆಸ್ಪತ್ರೆಗೆ ಚಿಕಿತ್ಸೆಗಾಗಿ ಆಗಮಿಸುವ ರೋಗಿಗಳನ್ನು ವೈದ್ಯರು ಹಾಗೂ ಸಿಬ್ಬಂದಿ ಸಮರ್ಪಕವಾಗಿ ನೋಡಿಕೊಳ್ಳುತ್ತಿಲ್ಲ ಎಂಬ ದೂರುಗಳು ಸಾರ್ವಜನಿಕರಿಂದ ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಯ ಹಾಜರಾತಿಯನ್ನು ಕಡ್ಡಾಯವಾಗಿ ಬಯೋಮೆಟ್ರಿಕ್ ವ್ಯವಸ್ಥೆಯ ಮೂಲಕ ದಾಖಲಿಸುವಂತೆ ಸೂಚಿಸಿದರು.

ವೈದ್ಯರು ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಿ, ರೋಗಿಗಳಿಗೆ ಸಮರ್ಪಕ ಹಾಗೂ ಗುಣಮಟ್ಟದ ವೈದ್ಯಕೀಯ ಸೇವೆ ಒದಗಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರೈತರ ಸಾಲ ವಸೂಲಾತಿಗೆ ಅನಗತ್ಯ ಒತ್ತಡ ಬೇಡ

ಬೆಳೆ ನಷ್ಟ, ಮಳೆ ಕೊರತೆ ಹಾಗೂ ವಿವಿಧ ಕಾರಣಗಳಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ, ಸಾಲ ಮರುಪಾವತಿಗೆ ಸಂಬಂಧಿಸಿದಂತೆ ರೈತರ ಮೇಲೆ ಯಾವುದೇ ರೀತಿಯ ಅನಗತ್ಯ ಒತ್ತಡ ಹೇರಬಾರದು ಎಂದು ಬ್ಯಾಂಕ್‌ಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳಾದ ಡಾ ಕುಮಾರ ಅವರು ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ವಾಡಿಕೆಯಂತೆ ಮಳೆಯಾಗದ ಹಿನ್ನೆಲೆಯಲ್ಲಿ ನೀರಿನ ಲಭ್ಯತೆ ಕಡಿಮೆಯಾಗಿದ್ದು, ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಕಳೆದ 20 ವರ್ಷಗಳ ಮಳೆ ಪ್ರಮಾಣವನ್ನು ಪರಿಶೀಲಿಸಿದಾಗ ಹಲವು ವರ್ಷಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದು ಕಂಡುಬಂದಿದೆ. ಪ್ರಸಕ್ತ ವರ್ಷವೂ ಮಳೆ ಕೊರತೆ ಮುಂದುವರಿದಿರುವುದರಿಂದ ಜಲಾಶಯಗಳು, ಕೆರೆ–ಕಟ್ಟೆಗಳು ಹಾಗೂ ಇತರೆ ಜಲಮೂಲಗಳಲ್ಲಿ ನೀರಿನ ಸಂಗ್ರಹಣೆ ನಿರೀಕ್ಷಿತ ಮಟ್ಟದಲ್ಲಿಲ್ಲ.

ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಜನರು ಮತ್ತು ಜಾನುವಾರುಗಳಿಗೆ ಅಗತ್ಯ ಪ್ರಮಾಣದ ನೀರು ಲಭ್ಯವಾಗುವಂತೆ ಅಗತ್ಯ ಕ್ರಮವಹಿಸಲಾಗಿದೆ.

ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ರೈತರು ನೀರಿನ ಮಿತ ಬಳಕೆಗೆ ಮುಂದಾಗಬೇಕು. ಹೆಚ್ಚಿನ ಪ್ರಮಾಣದಲ್ಲಿ ನೀರು ಅಗತ್ಯವಿರುವ ಬೆಳೆಗಳ ವಿಸ್ತೀರ್ಣವನ್ನು ಸಾಧ್ಯವಾದಷ್ಟು ಕಡಿಮೆ ಮಾಡಿ, ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಬೆಳೆಗಳಿಗೆ ಆದ್ಯತೆ ನೀಡುವಂತೆ ರೈತರಿಗೆ ಜಾಗೃತಿ ಮೂಡಿಸಲಾಗಿದೆ.

ವಿಶೇಷವಾಗಿ ರಾಗಿ, ಜೋಳ, ಅಲಸಂದೆ, ಎಳ್ಳು, ಉದ್ದು ಸೇರಿದಂತೆ ಕಡಿಮೆ ನೀರಿನ ಅವಶ್ಯಕತೆ ಇರುವ ಬೆಳೆಗಳನ್ನು ಬೆಳೆಯಲು ರೈತರಿಗೆ ಸಲಹೆ ನೀಡಲಾಗಿದೆ. ನೀರಿನ ಲಭ್ಯತೆ ಮತ್ತು ಮಳೆ ಪರಿಸ್ಥಿತಿಯನ್ನು ಆಧರಿಸಿ ಬೆಳೆ ಆಯ್ಕೆ ಮಾಡುವಂತೆ ಕೃಷಿ ಇಲಾಖೆಯ ಅಧಿಕಾರಿಗಳು ರೈತರಿಗೆ ಸೂಕ್ತ ಮಾರ್ಗದರ್ಶನ ನೀಡಲಾಗಿದೆ.

ಹೇಮಾವತಿ ಜಲಾಶಯಕ್ಕೆ ಸಂಬಂಧಿಸಿದಂತೆ ಈಗಾಗಲೇ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆ ನಡೆಸಲಾಗಿದ್ದು, ಸಭೆಯಲ್ಲಿ ಶಾಸಕರು ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳು ಭಾಗವಹಿಸಿದ್ದರು.

ಜಲಾಶಯದಿಂದ ಈಗಾಗಲೇ ನಾಲೆಗಳಿಗೆ ನೀರು ಹರಿಸಲಾಗುತ್ತಿದ್ದು, ಕೆ.ಆರ್. ಪೇಟೆ ಹಾಗೂ ನಾಗಮಂಗಲ ಭಾಗಗಳಿಗೂ ನಾಲೆಗಳ ಮೂಲಕ ನೀರು ತಲುಪುತ್ತಿದೆ ಎಂದು ಜಿಲ್ಲಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೆ.ಆರ್. ಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಹೆಚ್.ಟಿ ಮಂಜು,ವಿಧಾನ ಪರಿಷತ್ ಶಾಸಕರಾದ , ಕೆ. ವಿವೇಕಾನಂದ, ದಿಶಾ ಸಮಿತಿ ಸದಸ್ಯರು ಹಾಗೂ ಮಾಜಿ ಶಾಸಕ ಕೆ ಅಂದಾನಿ,ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ. ಆರ್. ನಂದಿನಿ, ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಶೋಭಾರಾಣಿ ವಿ.ಜೆ ಸೇರಿದಂತೆ ದಿಶಾ ಸಮಿತಿ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಗುಣಮಟ್ಟದಿಂದ ಕೂಡಿರಲಿ

ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆ ಕಾಮಗಾರಿಗಳನ್ನು ನಿಗದಿತ ಗುಣಮಟ್ಟ ಹಾಗೂ ಮಾನದಂಡಗಳಿಗೆ ಅನುಗುಣವಾಗಿ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಹೆದ್ದಾರಿಯಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಚಾರ ವ್ಯವಸ್ಥೆ, ಸರ್ವಿಸ್ ರಸ್ತೆ, ಚರಂಡಿ, ರಸ್ತೆ ಬದಿಯ ಸ್ವಚ್ಛತೆ ಹಾಗೂ ಸುರಕ್ಷತಾ ಕ್ರಮಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು.

ಈ ಖಾತಾ ಅಭಿಯಾನ ಚುರುಕುಗೊಳಿಸಿ: ಡಾ.ಯತೀಂದ್ರ ಸಿದ್ದರಾಮಯ್ಯ

ಮೈಸೂರು: ಸಾರ್ವಜನಿಕರು ತಮ್ಮ ಆಸ್ತಿಗೆ ಈ ಖಾತೆ ಮಾಡಿಸಿಕೊಳ್ಳಲು ನಗರ ಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಪ್ರೋತ್ಸಾಹಿಸಿ, ಈ ಖಾತೆ ಅಭಿಯಾನವನ್ನು ಚುರುಕುಗೊಳಿಸಿ ಎಂದು ನಗರಾಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಮಹಾನಗರ ಪಾಲಿಕೆಯ ಕಚೇರಿ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು. ಮೈಸೂರು ಮಹಾನಗರ ಪಾಲಿಕೆಯಲ್ಲಿರುವ ಆಸ್ತಿಗಳು ಮ್ಯಾಪಿಂಗ್ ಆಗಬೇಕು, ಆಗ ಆಸ್ತಿ ತೆರಿಗೆಯನ್ನು ನಿಖರವಾಗಿ ಪಡೆದುಕೊಳ್ಳಬಹುದು. ಪಾಲಿಕೆ ವ್ಯಾಪ್ತಿಯ ಮಾರುಕಟ್ಟೆ ಹಾಗೂ ವಾಣಿಜ್ಯ ಮಳಿಗೆಗಳ ಬಾಡಿಗೆ ಪರಿಷ್ಕರಣೆ ನಿಗದಿತವಾಗಿ ನಡೆಯಬೇಕು. ಇದರಿಂದ ಪಾಲಿಕೆಯ ಆದಾಯ ಹೆಚ್ಚಾಗುತ್ತದೆ. 2011 ರಿಂದ ವಾಣಿಜ್ಯ ಮಳಿಗೆಗಳು ಆಸ್ತಿ ತೆರಿಗೆ ಪಾವತಿ ಮಾಡದೇ ಇರುವುದು ಕಂಡುಬಂದಿದ್ದು, 2 ವರ್ಷಗಳ ಕಾಲ ತೆರಿಗೆ ಪಾವತಿಸದೇ ಇರುವ ವಾಣಿಜ್ಯ ಮಳಿಗೆಗಳಿಗೆ ನೋಟೀಸ್ ಜಾರಿ ಮಾಡಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದರು.

ಪಾದಚಾರಿ ಸ್ಥಳಗಳಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಲಾಗುತ್ತಿದೆ. ಪಾದಚಾರಿ ಸ್ಥಳಗಳಲ್ಲಿ ತರಕಾರಿ, ಹಣ್ಣು ಹಾಗೂ ಸಣ್ಣಪುಟ್ಟ ವಹಿವಾಟು ನಡೆಸುತ್ತಿರುವವರಿಗೆ ಸ್ಥಳಾವಕಾಶ ಮಾಡಿಕೊಡಬೇಕಿರುತ್ತದೆ. ಪಾಲಿಕೆ ವ್ಯಾಪ್ತಿಯಲ್ಲಿರುವ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಾಸಕರೊಂದಿಗೆ ಚರ್ಚಿಸಿ ವಲಯವಾರು ಸ್ಥಳ ಗುರುತಿಸಿ ವಾಣಿಜ್ಯ ಮಳಿಗೆ, ಫುಡ್ ಸ್ಟ್ರೀಟ್, ಮಾರುಕಟ್ಟೆ ನಿರ್ಮಾಣ ಮಾಡಲು ಯೋಜನೆ ರೂಪಿಸಿಕೊಳ್ಳಿ. ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ, ಮಾನ್ಯ ಮುಖ್ಯಮಂತ್ರಿಗಳ ಮೂಲಭೂತ ಅಭಿವೃದ್ಧಿ ಯೋಜನೆ, ಅಮೃತ್–2 ಯೋಜನೆ, ಎನ್.ಜಿ.ಟಿ ಕಾಮಗಾರಿ ಸೇರಿ ವಿವಿಧ ವಿಷಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಶಾಸಕ ತನ್ವೀರ್ ಸೇಠ್ ಮಾತನಾಡಿ ಪಾಲಿಕೆ ವ್ಯಾಪ್ತಿಯಲ್ಲಿರುವ ಮಾರುಕಟ್ಟೆ/ ವಾಣಿಜ್ಯ ಸಂಕೀರಣಗಳಿಂದ ಪಡೆಯುತ್ತಿರುವ ಬಾಡಿಗೆ, ಅವರಿಗೆ ನೀಡಲಾಗುತ್ತಿರುವ ಮೂಲಭೂತ ಸೌಕರ್ಯಗಳ ಚರ್ಚಿಸಿದರು. ಈ ಹಿಂದೆ ಬಾಡಿಗೆಗೆ ಒಪ್ಪಂದ ಮಾಡುಕೊಂಡವರು ಹಾಗೂ ಇಂದು ಸದರಿ ಸ್ಥಳಗಳಲ್ಲಿ ವಾಹಿವಾಟು ನಡೆಸುತ್ತಿರುವವರು ಬೇರೆ ಇದನ್ನು ಸರಿಪಡಿಸಬೇಕು. ಹೊಸ ವಾಣಿಜ್ಯ ಮಳಿಗೆ ಹಾಗೂ ಮಾರುಕಟ್ಟೆಗಳನ್ನು ನಿರ್ಮಾಣ ಮಾಡಲು ಪಾಲಿಕೆಗಳು ಯೋಜನೆ ರೂಪಿಸುತ್ತಿಲ್ಲ. ಈ ಹಿ

ಹಳ್ಳಿ ಖಾಲಿಯಾದರೆ ದೇಶದ ಬೇರುಗಳು ಒಣಗುತ್ತವೆ

| ಶಿವಬಸಪ್ಪ ಗು ಜಂಗಾಲಿ

ಭಾರತದ ಅಭಿವೃದ್ಧಿಯನ್ನು ನಾವು ಸಾಮಾನ್ಯವಾಗಿ ನಗರಗಳ ಎತ್ತರದ ಕಟ್ಟಡಗಳು, ಅಗಲವಾದ ರಸ್ತೆಗಳು, ಮೆಟ್ರೋ ರೈಲುಗಳು, ಕೈಗಾರಿಕೆಗಳು ಮತ್ತು ತಂತ್ರಜ್ಞಾನದ ಬೆಳವಣಿಗೆಯ ಮೂಲಕ ಅಳೆಯುತ್ತೇವೆ. ಆದರೆ ಭಾರತದ ನಿಜವಾದ ಶಕ್ತಿ ಕೇವಲ ನಗರಗಳಲ್ಲಿ ಇಲ್ಲ. ಅದು ದೂರದ ಹಳ್ಳಿಗಳ ಮಣ್ಣಿನಲ್ಲಿ, ಹೊಲದಲ್ಲಿ ಬೆವರು ಸುರಿಸುವ ರೈತನಲ್ಲಿ, ಜಾನುವಾರು ಸಾಕುವ ಕುಟುಂಬಗಳಲ್ಲಿ, ಕೆರೆ-ಕಾಲುವೆಗಳನ್ನು ಕಾಪಾಡುವ ಗ್ರಾಮಸ್ಥರಲ್ಲಿ ಹಾಗೂ ಶಾಲೆಯತ್ತ ಹೆಜ್ಜೆ ಹಾಕುವ ಮಕ್ಕಳ ಕನಸುಗಳಲ್ಲಿ ಅಡಗಿದೆ.

ಇಂದು ಈ ಗ್ರಾಮೀಣ ಭಾರತದ ಚಿತ್ರ ನಿಧಾನವಾಗಿ ಬದಲಾಗುತ್ತಿದೆ. ಉದ್ಯೋಗ, ಶಿಕ್ಷಣ, ಆರೋಗ್ಯ ಮತ್ತು ಉತ್ತಮ ಜೀವನಮಟ್ಟದ ಹುಡುಕಾಟದಲ್ಲಿ ಯುವಕರು ನಗರಗಳತ್ತ ವಲಸೆ ಹೋಗುತ್ತಿದ್ದಾರೆ. ನಗರಕ್ಕೆ ಹೋಗುವುದು ತಪ್ಪಲ್ಲ; ಅವಕಾಶಕ್ಕಾಗಿ ಸ್ಥಳ ಬದಲಿಸುವುದು ಸಹಜ. ಆದರೆ ಹಳ್ಳಿಯಲ್ಲಿ ಬದುಕು ಕಟ್ಟಿಕೊಳ್ಳಲು ಅವಕಾಶವೇ ಇಲ್ಲದಿರುವುದು ಮಾತ್ರ ಆತಂಕಕಾರಿ.

ಒಮ್ಮೆ ಹಳ್ಳಿ ಸ್ವಾವಲಂಬನೆಯ ಪ್ರತೀಕವಾಗಿತ್ತು. ಕೃಷಿ, ಪಶುಸಂಗೋಪನೆ, ಸಣ್ಣ ವ್ಯಾಪಾರ, ಕೈಗಾರಿಕೆ ಮತ್ತು ಸ್ಥಳೀಯ ಕೌಶಲ್ಯಗಳು ಗ್ರಾಮೀಣ ಆರ್ಥಿಕತೆಯ ಆಧಾರವಾಗಿದ್ದವು. ಇಂದು ಯುವ ಪೀಳಿಗೆ ಕೃಷಿಯಿಂದ ದೂರವಾಗುತ್ತಿರುವುದು ಗಂಭೀರ ಪ್ರಶ್ನೆಯನ್ನು ಹುಟ್ಟುಹಾಕಿದೆ ರೈತನ ಮಗನೇ ಹೊಲ ತೊರೆದರೆ, ನಾಳೆಯ ಅನ್ನವನ್ನು ಬೆಳೆಯುವವರು ಯಾರು?.

ಕೃಷಿ ಕೇವಲ ಉದ್ಯೋಗವಲ್ಲ; ಅದು ದೇಶದ ಆಹಾರ ಭದ್ರತೆಯ ಜೀವನಾಡಿ. ಹವಾಮಾನ ಬದಲಾವಣೆ, ನೀರಿನ ಕೊರತೆ, ಹೆಚ್ಚುತ್ತಿರುವ ಉತ್ಪಾದನಾ ವೆಚ್ಚ ಮತ್ತು ಮಾರುಕಟ್ಟೆಯ ಅನಿಶ್ಚಿತತೆ ರೈತನ ಬದುಕನ್ನು ಕಠಿಣಗೊಳಿಸುತ್ತಿವೆ. ಆದ್ದರಿಂದ ರೈತನಿಗೆ ಕೇವಲ ನೆರವು ನೀಡುವುದಕ್ಕಿಂತ

ಕೃಷಿಯನ್ನು ಗೌರವಯುತ, ತಂತ್ರಜ್ಞಾನಾಧಾರಿತ ಮತ್ತು ಸ್ಥಿರ ಆದಾಯದ ವೃತ್ತಿಯನ್ನಾಗಿ ರೂಪಿಸುವುದು ಅಗತ್ಯ.

ಹಳ್ಳಿಗಳಲ್ಲಿ ಉದ್ಯೋಗ ಸೃಷ್ಟಿಯಾಗಬೇಕು. ಕೃಷಿ ಆಧಾರಿತ ಕೈಗಾರಿಕೆಗಳು, ಆಹಾರ ಸಂಸ್ಕರಣಾ ಘಟಕಗಳು, ಹೈನುಗಾರಿಕೆ, ಸಣ್ಣ ಉದ್ಯಮಗಳು, ಕೌಶಲ್ಯ ಗ್ರಾಮೀಣ ಪ್ರವಾಸೋದ್ಯಮ ಮತ್ತು ಡಿಜಿಟಲ್ ಸೇವೆಗಳಿಗೆ ಉತ್ತೇಜನ ನೀಡಬೇಕು. ಹಳ್ಳಿಗೆ ನಗರವನ್ನು ಕೊಂಡೊಯ್ಯಬೇಕಿಲ್ಲ; ನಗರದ ಅವಕಾಶಗಳನ್ನು ಹಳ್ಳಿಯ ಬಾಗಿಲಿಗೆ ತಲುಪಿಸಬೇಕು.

ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಸೇವೆಗಳೂ ಗ್ರಾಮೀಣ ಬದುಕಿನ ಮೂಲಭೂತ ಅಗತ್ಯಗಳು. ಉತ್ತಮ ಶಾಲೆ, ಸಮರ್ಪಕ ವೈದ್ಯಕೀಯ ಸೇವೆ, ಶುದ್ಧ ಕುಡಿಯುವ ನೀರು, ವಿದ್ಯುತ್, ಸಾರಿಗೆ ಮತ್ತು ಇಂಟರ್ನೆಟ್ ಸೌಲಭ್ಯಗಳು ಹಳ್ಳಿಯಲ್ಲೇ ದೊರೆತರೆ ನಗರಕ್ಕೆ ವಲಸೆ ಹೋಗುವ ಅನಿವಾರ್ಯತೆ ಬಹಳಷ್ಟು ಕಡಿಮೆಯಾಗಬಹುದು.

ಕೆರೆ, ಬಾವಿ, ಕಾಲುವೆ, ಗೋಮಾಳ ಮತ್ತು ಮರಗಳು ಹಳ್ಳಿಯ ಜೀವನಾಡಿ. ಕೆರೆ ಉಳಿಸುವುದು ಕೇವಲ ನೀರನ್ನು ಉಳಿಸುವುದಲ್ಲ; ಒಂದು ಗ್ರಾಮದ ಭವಿಷ್ಯವನ್ನು ಉಳಿಸುವುದು. ಪರಿಸರ ಸಂರಕ್ಷಣೆ ಮತ್ತು ನೀರಿನ ನಿರ್ವಹಣೆಗೆ ಗ್ರಾಮಮಟ್ಟದಲ್ಲೇ ಶಾಶ್ವತ ಯೋಜನೆಗಳು ಅಗತ್ಯ.

ಗ್ರಾಮೀಣ ಮಹಿಳೆಯರು ಮತ್ತು ಯುವಕರನ್ನು ಅಭಿವೃದ್ಧಿಯ ಕೇಂದ್ರಬಿಂದುವನ್ನಾಗಿ ಮಾಡಬೇಕು. ಮಹಿಳೆಯರಿಗೆ ಉದ್ಯಮ ಮತ್ತು ಸ್ವಾವಲಂಬನೆಗೆ ಅವಕಾಶ ನೀಡಬೇಕು. ಯುವಕರಿಗೆ ತಮ್ಮ ಊರಿನಲ್ಲೇ ಉದ್ಯೋಗ ಮತ್ತು ಉದ್ಯಮ ಆರಂಭಿಸಲು ಪ್ರೋತ್ಸಾಹ ನೀಡಬೇಕು. ಗ್ರಾಮ ಪಂಚಾಯಿತಿಗಳು ಮತ್ತು ಗ್ರಾಮಸಭೆಗಳು ಜನರ ನಿಜವಾದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಸಕ್ರಿಯ ವೇದಿಕೆಗಳಾಗಬೇಕು.

ಹಳ್ಳಿಗಳು ಖಾಲಿಯಾಗುವುದು ಕೇವಲ ಮನೆಗಳಿಗೆ ಬೀಗ ಬೀಳುವುದಲ್ಲ. ಅದರೊಂದಿಗೆ ಹೊಲಗಳು ಬಿಕೋ ಎನ್ನುತ್ತವೆ, ಶಾಲೆಗಳ ಧ್ವನಿ ಕ್ಷೀಣಿಸುತ್ತದೆ, ಜನಪದ ಸಂಸ್ಕೃತಿ ಮಸುಕಾಗುತ್ತದೆ ಮತ್ತು ಸಾಮಾಜಿಕ ಸಂಬಂಧಗಳು ಸಡಿಲವಾಗುತ್ತವೆ.

ನಗರಗಳು ಭಾರತದ ಅಭಿವೃದ್ಧಿಯ ವೇಗವಾಗಿದ್ದರೆ, ಹಳ್ಳಿಗಳು ಭಾರತದ ಅಸ್ತಿತ್ವ. ನಗರಗಳು ದೇಶದ ಮುಖವಾಗಿದ್ದರೆ, ಹಳ್ಳಿಗಳು ಅದರ ಬೇರುಗಳು.

ಬೇರುಗಳು ಗಟ್ಟಿಯಾಗಿದ್ದಾಗ ಮಾತ್ರ ಮರ ಎತ್ತರಕ್ಕೆ ಬೆಳೆಯುತ್ತದೆ. ಆದ್ದರಿಂದ ಭಾರತದ ಅಭಿವೃದ್ಧಿಯ ಮುಂದಿನ ಹೆಜ್ಜೆ ಕೇವಲ ನಗರಗಳತ್ತ ಇರಬಾರದು; ಅದು ಹಳ್ಳಿಗಳತ್ತವೂ ಇರಬೇಕು.

ಹಳ್ಳಿ ಉಳಿದರೆ ರೈತ ಉಳಿಯುತ್ತಾನೆ. ರೈತ ಉಳಿದರೆ ಕೃಷಿ ಉಳಿಯುತ್ತದೆ. ಕೃಷಿ ಉಳಿದರೆ ಅನ್ನದ ಭದ್ರತೆ ಉಳಿಯುತ್ತದೆ. ಅನ್ನದ ಭದ್ರತೆ ಉಳಿದರೆ ಭಾರತದ ಭವಿಷ್ಯ ಸುರಕ್ಷಿತವಾಗುತ್ತದೆ. ಹಳ್ಳಿ ಖಾಲಿಯಾಗದಂತೆ ನೋಡಿಕೊಳ್ಳುವುದು ಗ್ರಾಮೀಣ ಭಾರತದ ಕರ್ತವ್ಯ ಮಾತ್ರವಲ್ಲ ಇಡೀ ದೇಶದ ಭವಿಷ್ಯದ ಜವಾಬ್ದಾರಿ.

ಮಾತಿನಲಿ ನಯವಿರಲಿ

ಮುದ್ದುರಾಮನ ಅರಿವು ಭಾಗ- 3

ಡಾ. ಪ್ರದೀಪಕುಮಾರ ಹೆಬ್ರಿ



ತೂಕ ತಪ್ಪಿದ ಮಾತು, ಆಯ ತಪ್ಪಿದ ನಡಿಗೆ
ಕರೆದ ನೊರೆಹಾಲಿನಲಿ ಹುಳಿ ಹಿಂಡಿದಂತೆ
ಮಾತಿನಲಿ ನಯವಿರಲಿ, ನಡಿಗೆಯಲಿ ಲಯವಿರಲಿ;
ನುಡಿಗೆ ನಡೆ ಬೆಲೆ ತರಲಿ– ಮುದ್ದುರಾಮ

'ಮಾತೆ ಜ್ಯೋತಿರ್ಲಿಂಗ' ಶರಣರೆದೆದನಿಯೆಂಬುದನ್ನು ನಾವೆಲ್ಲ ಅರಿತವರು. ಮಾತು ನಯವಾಗಿರಲಿ, ಹಿತವಾಗಿರಲಿ ಎಂಬ ಅಪೇಕ್ಷೆಯವರೂ ನಾವು. ಸುಜ್ಞಾನಿಗಳು ಎನಿಸಿಕೊಂಡವರ ಊರು, ಕಾಲ, ವೇಷ, ಭಾಷೆ, ವೃತ್ತಿ ವಿವಿಧ ರೀತಿಯದ್ದಾದರೂ ಅವರ ಮಾತು ಮಲ್ಲಿಗೆಯ ಹೂವಿನಂತೆ ಸದಾ ಶಾಂತಿಯ ಸುಗಂಧವನ್ನು ಸೂಸುತ್ತವೆ. ಇವರು ತುಟಿ ತೆರೆದರೆ ಅದುವೆ ಭಾವತರಂಗ ವಾಗಿ ದನಿಸುತ್ತದೆ. ಸಮತೆ ಸರಳತೆಗದುವೆ ಚೆಲುಚಿತ್ರದಾವರಣ ವಾಗಿ ಕಂಗೊಳಿಸುತ್ತದೆ.

ಮಾತು ಎಂದೂ ಅತಿ ಎಂದಾಗಬಾರದು. ಮಿತಿಯಲ್ಲಿರಬೇಕು. ಆಗಲೇ ಹಿತಮಿತದ ಅನುಭೂತಿ. ' ನೀನಾಡುವ ಮಾತು ಹೀಗಿರಲಿ ಗೆಳೆಯ, ಮೃದುವಚನ ಮೂಲೋಕ ಗೆಲ್ಲುವುದು ತಿಳಿಯ' ಮಾತಿನನುಸಾರ ಮಿತಮಾತು ಹಿತಧಾತು ಎಂಬುದನ್ನು ಅರಿವಿಗೆ ಆವಾಹಿಸಿಕೊಂಡು ಮುಂದುವರಿದರೆ ಮಾತು ಜೀವನಧಾತು ಎಂದೆನಿಸುತ್ತದೆ. ಆದರೆ 'ಮಾತು' ಎಂಬುದರ ಕುರಿತು ಪ್ರಜ್ಞಾವಂತಿಕೆ ಬೇಕೇಬೇಕು. ಏಕೆಂದರೆ ಹಿಂಪಡೆಯುವೆಯ ನುಡಿಯ? ಎಂಬುದು ನಮ್ಮನ್ನು ಸದಾ ಕಾಡತೊಡಗಿದರೆ ಆಡುವಾಗ ಎಚ್ಚರ ಇದ್ದೇ ಇರುತ್ತದೆ.

ನಾವು ಆಡಿದ ಮಾತು ಬಿಟ್ಟ ಬಾಣ. ಏಕಮುಖ ಸಂಚಾರ. ಸಂಯಮವನ್ನು ಮೈಗೂಡಿಸಿಕೊಂಡರೆ ಎಲ್ಲಿ ಯಾರೊಡನೆ ಹೇಗೆ ಮಾತಾಡಬೇಕೆಂಬುದರ ಅರಿವು ನಮಗಿರುತ್ತದೆ. ಮಾತು ಜೀವನಧಾತು ಎಂದರಿತಾಗ ಮಾತ್ರ ನಮ್ರತೆಯ ಆವಾಹನೆ. ಹಿತಮಿತದ ವಾದ-ವಿವಾದ. ನಾವಾಡುವ ಮಾತಿನಲ್ಲಿ ನಮಗೆ ಸಂಯಮದ ಆವಾಹನೆ ಇದ್ದಾಗ ಮಾತ್ರ ನಮ್ಮ ಮನಸ್ಸು ರಾಗದಿಂದ ಹೇಳುವುದು,ಹದವರಿತ ಮಾತಿಂದ ಮಂಗಳದ ಮುನ್ನಡೆ ಎಂದು. ಹಾಗಾಗಿ ನಾವಾಡುವಾಗ ನುಡಿಗರ್ಥ ತುಂಬಿರಲಿ ಎಂಬ ಅರಿವು ನಮಗೆ ಬೇಕು. ಏಕೆಂದರೆ, ತೂಕ ತಪ್ಪಿದ ಮಾತು, ಆಯ ತಪ್ಪಿದ ನಡಿಗೆ, ಕರೆದ ನೊರೆಹಾಲಿನಲಿ ಹುಳಿ ಹಿಂಡಿದಂತೆ ಆಗುವಾಗ ನಮ್ಮ ನುಡಿಗೆ ನಡೆ ಬೆಲೆ ತರಲೇಬೇಕು. ನಮ್ಮ ಬದುಕು ಎನುವ ಹಾಲಿಗೆ ಸವಿಮಾತು ಎಂಬ ಹೆಪ್ಪಿಟ್ಟಾಗ ಅದು ಹಸನಾದ ಮನದ ಕೆನೆಮೊಸರಾಗುತ್ತದೆ. ಮಾತು ಸದಾಚಾರದ ಪ್ರತಿಬಿಂಬವಾಗಿದ್ದರೆ ಬದುಕಿನಾನಂದಕ್ಕೆ ಮುನ್ನುಡಿ ಬೇಯುತ್ತದೆಂಬ ನಂಬಿಕೆಯಲ್ಲಿ ನಮ್ಮ ಮನಸ್ಸು ನುಡಿಯಲೆಚ್ಚರವಿರಲಿ ಎಂದು ದನಿಸುತ್ತಲೇ ಇರಬೇಕು.



ಕ.ನಿ.ಶಿವಪ್ಪ

ನಾವು ನಮ್ಮ ಬದುಕಿನ ದಾರಿಯಲ್ಲಿ ಮೈಯೆಲ್ಲಾ ಕಣ್ಣಾಗಿ ನಡೆಯಬೇಕು. ಅರಿವಿಗೆ ಬರದಂತೆ ಎದುರಾಗುವ ಸುಮಧುರದ ಘಟನೆಗಳು , ಸವಿನುಡಿ, ಹೂಮಾತು ನಮ್ಮ ಅರಿವಿನ ಕಣ್ಣನ್ನು ತೆರೆಸಿ ದುಡುಕಿ ಮಾತಾಡಿದರೆ ಕಷ್ಟ ನೂರಾರು ಎಂದು ಮನಗಾಣಿಸುತ್ತದೆ. ಮಾತು ಮನೆಮಾಡಿರುವುದೆ ಸಹೃದಯರ ಮನದಲ್ಲಿ ಎಂಬುದನ್ನರಿತರೆ ಅದೇ ಸತ್ಯಶಿವ ದರ್ಶನದ ಆನಂದವನ್ನು ಕರುಣಿಸುತ್ತದೆ. ಹಾಗಾಗಿ ಎಲ್ಲಿ ಏನೇ ನಡೆಯಲಿ, ನಮ್ಮ ಗಮನಕ್ಕದು ಬಂದೇ ಬರುತ್ತದೆ. ಅದೇ ಜ್ಞಾನ ವಿಸ್ತಾರ. ಇದರಿಂದ ಅರಿವಾಗುವುದೇ ಸವಿಮಾತು ಒಡಲಲ್ಲಿ ತುಂಬಿದ್ದರೆ ನಮ್ಮ ವಿಶ್ವವೇ ನಮಗೆ ಪುಟ್ಟಹಳ್ಳಿ ಇದ್ದಂತೆ. ಹಾಗಾಗಿ ನಿಸರ್ಗ ಕರುಣಿಸಿದ ಅಪರೂಪದ ಕಾಣಿಕೆಯಾದ ನಮ್ಮ ಬದುಕಿನಿಂದ ಸಾರ್ಥಕತೆಯ ಸರದಾರರು ನಾವಾಗೋಣ.

| ಸ್ನೇಹಾ ಆನಂದ್

ನಮ್ಮ ಮನಸ್ಸಿನಲ್ಲಿರುವ ಕನಸುಗಳು ಹಗಲು,ರಾತ್ರಿ ಅನ್ನದೇ ನಮ್ಮನ್ನು ಅಟ್ಟಿಸಿಕೊಂಡು ಬಂದಾಗ ವಿಶ್ರಾಂತಿ ಕೊಡದಂತೆ ಕೆಲಸ ಮಾಡಿದರೆ ಆ ಕನಸುಗಳನ್ನು ನಾವು ನನಸು ಮಾಡಬಹುದು! ಆದರೆ ಅದೊಂದು ಜೀವನದ ತಪಸ್ಸೇ ಸರಿ,ಯಾವುದೇ ಕೆಲಸ ತಪಸ್ಸಿನಂತೆ ಮಾಡಿದಾಗ ಮಾತ್ರ ನಮ್ಮ ಗುರಿ ತಲುಪಬಹುದು!

ಒಂದೊಂದು ಬಾರಿ ಎಷ್ಟೇ ತಪಸ್ಸಿನಂತೆ ಆ ಕೆಲಸವನ್ನು ಮಾಡಿದರೂ ಕೂಡ ಜಯ ಸಿಗದೇ ನಿರಾಸೆಯಾಗುತ್ತದೆ! ಅಂದರೆ ಕೈಗೆ ಬಂದ ತುತ್ತು ಬಾಯಿಗೆ ಬಾರದಂತೆ ಹೋಗುವುದು, ಇನ್ನೇನು ಆ ತುತ್ತು ಉಣ್ಣಬೇಕು ಅನ್ನುವಾಗ ಕೈಯಿಂದ ಜಾರಿ ನೆಲಕ್ಕೆ ಬೀಳುತ್ತದೆ!

ಅದರಂತೆ ಕನಸು ಕೂಡ ಇನ್ನೇನು ಈ ಕ್ಷಣಕ್ಕೆ ಕೈಗೂಡಿ ಬಿಡುತ್ತದೆ ಎಂದೆನಿಸಿದಾಗ ನನಸಾಗದೆ ನೆಲಕ್ಕೆ ಕುಸಿಯುತ್ತಿದೆ, ಆಗ ನಿರಾಸೆ ಕಟ್ಟಿಟ್ಟ ಬುತ್ತಿ! ಆದರೆ ಅದರಿಂದ ಸಿಕ್ಕ ಅನುಭವ ಇದೆಯಲ್ಲ ಅದು ಜಯ ಗಳಿಸಿದಷ್ಟೇ ಜೀವನಕ್ಕೆ ಒಳ್ಳೆಯ ಪಾಠ ಕಲಿಸುತ್ತದೆ, ಆ ಒಂದು ವಿಷಯದಲ್ಲಿ ಸೋತರೂ ಕೂಡ, ಅನುಭವದ ಮೇರೆಗೆ ಬಹುಶಃ ಇನ್ನೊಂದು ರೀತಿಯಲ್ಲಿ ಜಯ ಗಳಿಸಲು ಸಾಧ್ಯವಾಬಹುದು!

ಜೀವನದ ಹಾದಿಯಲ್ಲಿ ಏಳು ಬೀಳುಗಳು ಸಹಜ.ಗೆದ್ದರೆ ಸಮಸ್ಯೆಯೇ ಇಲ್ಲ, ಆದರೆ ಕೆಳಗೆ ಬಿದ್ದಾಗ ಹೊಡೆತ ಯಾವ ಮಟ್ಟದ್ದು ಎನ್ನುವುದರ ಮೇಲೆ ಮತ್ತೆ ಆ ಪ್ರಯತ್ನ ಮುಂದುವರೆಸಲು ಸಾಧ್ಯವೇ ಎಂದು ಯೋಚಿಸಿ ಕಾಲಿಡಬೇಕಾಗುತ್ತದೆ!

ಇಂತಹ ಏಳುಬೀಳುಗಳಲ್ಲಿ ನಾವು ಯಾವ ರೀತಿ ಮುಂದಡಿ ಎಡವುತ್ತೇವೆ ಎನ್ನುವುದರ ಮೇಲೆ ನಮ್ಮ ಭವಿಷ್ಯ ನಿರ್ಧಾರವಾಗುತ್ತದೆ!

ಜೀವನದಲ್ಲಿ ಇಂತಹ ನಿರ್ಧಾರಗಳೇ ನಮ್ಮ ಕನಸನ್ನು ಕಟ್ಟುತ್ತವೆ, ಅಳಿಸಿಯೂ ಹಾಕುತ್ತವೆ ಕೂಡ! ನಮ್ಮ ಸಮಯ ಸರಿ ಇರದಿದ್ದರೆ ಸೋಲು ಖಂಡಿತ, ಅದೇ ನಮಗೇ ಗೊತ್ತಿಲ್ಲದಂತೆಯೇ ಸರಿಯಾದ ಸಮಯಕ್ಕೆ ಸರಿಯಾದ ನಿರ್ಧಾರ ತೆಗೆದುಕೊಂಡಿದ್ದಾದರೆ ಲಾಟರಿ ಹೊಡೆದಂತೆ ನಮ್ಮ ಜೀವನದಲ್ಲಿ ಜಯ ಜಯಭೇರಿ ಬಾರಿಸುತ್ತದೆ!

ಹೀಗೆ ಕನಸುಗಳು ನನಸಾಗವ ರೀತಿಯಲ್ಲಿ ನಮ್ಮ ಜೀವನದ ಗುಣಮಟ್ಟ ನಿಂತಿರುತ್ತದೆ, ಒಂದೊಂದು ಬಾರಿ ಜಯ ಜೋರಾಗಿಯೇ ಸಿಕ್ಕರೂಅಹಂಕಾರದಿಂದ ಜಯ ವಿನಾಶದತ್ತ ತೆರಳಿ ಸಿಕ್ಕ ಜಯಕ್ಕೆ ಸೋಲಾಗಿಬಿಡುತ್ತದೆ! ಕಷ್ಟಗಳ ಹೊಡೆತ ಒಂದಾದ ಮೇಲೆ ಒಂದರಂತೆ ಬಿದ್ದರೆ ಗಳಿಸಿದ ಜಯ ಅಪಜಯವೆನಿಸುತ್ತದೆ!

ಇದನ್ನು ಎಷ್ಟೋ ಶ್ರೀಮಂತರಲ್ಲಿ ಕಾಣಬಹುದು, ಒಂದು ಸಮಯದಲ್ಲಿ ಅತಿ ಶ್ರೀಮಂತ ವ್ಯಕ್ತಿ, ಥಟ್ಟನೆ ಸಾಲಗಳ ಸಂತೆಗೆ ಬಂದು ಬಿಡುತ್ತಾನೆ! ಅದಕ್ಕೆ ಕಾರಣ ಕಾಲ, ಸಮಯ ಆ ವ್ಯಕ್ತಿಗೆ ಜಯ ಕೊಟ್ಟಿದ್ದರೂ, ನಾನೇ ಎಲ್ಲಾ ಸಾಧಿಸಿದ್ದು ಎನ್ನುವ ಅಹಂಕಾರದ ಮಾತು ಇದೆಯಲ್ಲ ಅದು ಒಂದಲ್ಲ ಒಂದು ದಿನ ಆ ವ್ಯಕ್ತಿಗೆ ಪಾಠ ಕಲಿಸುತ್ತದೆ!

ಹೀಗಾಗಿ ಕೆಲಸದಲ್ಲಿ ಜಯ ಸಿಕ್ಕಾಗ ಮನಸ್ಸು ಅಹಂಕಾರಕ್ಕೆ ಒಳಗಾಗದೆ ಒಳ್ಳೆಯ ಕಾರ್ಯಗಳನ್ನು ಮಾಡಿ ಜೀವನ ಸಾರ್ಥಕ ಪಡಿಸಿಕೊಳ್ಳಬೇಕು ಎಂದಿದ್ದಾರೆ ಮಹಾತ್ಮರು!

ಒಂದು ಕನಸು ನನಸಾಗುವುದಕ್ಕೆ, ಮಗು ಹುಟ್ಟಿದಾಗ ತಂದೆ, ತಾಯಿ ಪಟ್ಟ ಶ್ರಮ, ಕಲಿಸಿದ ಗುರುಗಳು ಹಾಗು ಆ ವ್ಯಕ್ತಿಯ ಜ್ಞಾನ ಎಲ್ಲವೂ ಸೇರಿ ಆ ವ್ಯಕ್ತಿ ಜಯಭೇರಿ ಬಾರಿಸುವುದು! ಜೀವ, ಜೀವನ ಕೊಟ್ಟು ವಿದ್ಯೆ ಕಲಿಸಿದ ತಂದೆ ತಾಯಿಗಳು ಹಾಗು ಗುರುಗಳು ನಮ್ಮ ಸಾಧನೆಯ ಹಾದಿಯಲ್ಲಿ ಮೊದಲ ಸ್ಥಾನದಲ್ಲಿ ನಿಲ್ಲುತ್ತಾರೆ...

ಹೀಗಾಗಿ ಜೀವನದ ಏಳುಬೀಳುಗಳು ಮನುಷ್ಯನಿಗೆ ಸದಾ ಪಾಠ ಕಲಿಸುವ ಗುರು ಇದ್ದಂತೆ!

ಸ್ನೇಹ ಲೋಕ

ಕನಸುಗಳು

ಸದೃಢ ದೇಹದ ಸಾವಿಲ್ಲದ ಹೋರಾಟ

ದೇಹದ ಪ್ರತಿ ನಾರಿನಲ್ಲೂ ಬಲ ತುಂಬಿದಾಗ, ಮರಣದ ಛಾಯೆಯೂ ಹೆದರಿ ಹಿಂದೆ ಸರಿಯುತ್ತದೆ. ಐಸೋಮೆಟ್ರಿಕ್? ಹಿಡಿತದ ಪ್ಲ್ಯಾಂಕ್, ಗೋಡೆಗೆ ಒರಗಿದ ವಾಲ್-ಸಿಟ್‌ಗಳು ಕೋಶಗಳಲ್ಲಿನ ಟೆಲೋಮಿಯರ್ ಎಂಬ ಆಯುಷ್ಸಿನ ದಾರವನ್ನು ಕಾಪಾಡಿ, ಜೈವಿಕ ಕಾಲಚಕ್ರವನ್ನು ಮೆಲ್ಲನೆ ಹಿಮ್ಮುಖಗೊಳಿಸುತ್ತವೆ. ಭುಜ-ಬೆನ್ನಿನ ಸ್ನಾಯು ಗಟ್ಟಿಯಾದಂತೆ ಪುಪ್ಪುಸದ ಪಸೆ ವಿಸ್ತರಿಸಿ, ರಕ್ತದೊಡಲಲ್ಲಿ ಆಮ್ಲಜನಕದ ಓಕುಳಿ ಚಿಮ್ಮುತ್ತದೆ. ಫಾಸ್ಟ್-ಟ್ವಿಚ್ ನಾರುಗಳನ್ನು ಕೆಣಕುವ ಜಿಗಿತ, ಚಿಲುಮೆಯ ಓಟ ಮುಪ್ಪಿನ ಮಂಪರಿಗೆ ಚಾಟಿ ಬೀಸುತ್ತದೆ.

ಸಮಷ್ಟಿಯ ಕಣದಲ್ಲಿ ಸದೃಢತೆಯೇ ಸಂಭ್ರಮವಾಗಲಿ. ಕೆರೆದಂಡೆಯ ಮೇಲೆ ನಸುಕಿನಲ್ಲಿ ನೂರಾರು ಕೈಗಳ ಸಾಮೂಹಿಕ ಸೂರ್ಯವಂದನೆ, ಹಳ್ಳಿಯ ಜಾತ್ರೆಯಲ್ಲಿ ಯುವಕರ ಕಲ್ಲು-ಗುಂಡು ಎತ್ತುವ ಪೈಪೋಟಿ, ಮಹಿಳೆಯರಿಗಾಗಿ ಕಲರಿ-ಕೋಲಾಟದ ಮುಂಜಾನೆ ತರಗತಿ ಇವೆಲ್ಲ ತಲೆಮಾರುಗಳ ನಡುವೆ ಬಲದ ಬೆಸುಗೆ ಹಾಕುತ್ತವೆ. ಅಂಗನವಾಡಿಯಿಂದ ಅಖಾಡದವರೆಗೆ ಎಲ್ಲರಿಗೂ ಎಟುಕುವ ವ್ಯಾಯಾಮ ಕೇಂದ್ರಗಳು ಬಂದರೆ, ಊರಿನ ಆರೋಗ್ಯದ ರೇಖಾಚಿತ್ರವೇ ಬದಲಾಗುತ್ತದೆ. ಸದೃಢ ಜನರಿರುವ ನೆಲಕ್ಕೆ ರೋಗದ ದೂತ ಕಾಲಿಡಲು ಅಳುಕುತ್ತಾನೆ.

ಆರೋಗ್ಯದ ಗುಟ್ಟು: ಬೆಳಗ್ಗೆ ಎದ್ದೊಡನೆ 60 ಕ್ಷಣ ಗೋಡೆಗೆ ಒರಗಿ ಕುಳಿತುಕೊಳ್ಳಿ. ಧಾರಾವಾಹಿಯ ಜಾಹೀರಾತು ವೇಳೆಯಲ್ಲಿ ಹತ್ತು ಬರ್ಪಿ,ಹದಿನೈದು ಲಂಜಸ್ ಮುಗಿಸಿ. ವಾರಾಂತ್ಯಕ್ಕೆ ಹತ್ತಿರದ ಗುಡ್ಡ ಏರಿ,ಏಣಿ ಹತ್ತಿ, ಕೆರೆಯಲ್ಲಿ ಮುಳುಗೇಳಿ. ತಟ್ಟೆಯಲ್ಲಿ ಸೋಯಾ ಚೂರು,ಕಡಲೆಹಿಟ್ಟಿನ ದೋಸೆ, ಗಟ್ಟಿಮೊಸರು ಸ್ನಾಯುಗಳಿಗೆ ಸುಣ್ಣ-ಸಿಮೆಂಟ್.

ಹೀಗೆ ದೇಹವನ್ನು ಉಕ್ಕಿನಂತೆ ಪಳಗಿಸಿದರೆ, ಸಾವೆಂಬ ವೈರಿ ಸೆಣಸಲೂ ಬೆದರಿ ನಿಲ್ಲುತ್ತದೆ. ಸದೃಢತೆಯೇ ಅಮರತ್ವದ ಮೊದಲ ಬಾಗಿಲು.

ಅಂಕಣ-08
ಸಾವು ಸಂಕಟಪಡುವ ಸಂಗತಿಗಳು..!
|ಡಾ.ಸುಧಾಕರ.ಜಿ.ಲಕ್ಕವಳ್ಳಿ

ಮೊಡವೆಗೆ ಮನೆ ಮದ್ದು

ಮೊಡವೆ ಬಂದರೆ ಅದು ಆತ್ಮವಿಶ್ವಾಸವನ್ನೇ ಕುಗ್ಗಿಸಿಬಿಡುತ್ತದೆ, ಯಾವ ಕ್ರೀಮ್ ಹಚ್ಚಿದರೂ ಕಡಿಮೆಯಾಗುವುದಿಲ್ಲ. ಮೊಡವೆ ಹೆಚ್ಚು ಬರುವುದನ್ನು ತಡೆಯಲು ಮೊದಲು ಮುಖ ಎಣ್ಣೆಯಾಗಲು ಬಿಡಬಾರದು. ಚರ್ಮರೋಗಗಳ ತಜ್ಞರನ್ನು ಸಂಪರ್ಕಿಸುವುದು

ಹದಿಹರೆಯದ ವಯಸ್ಸಿನಲ್ಲಿ ಹೆಚ್ಚಾಗಿ ಕಂಡು ಬರುವ ಸೌಂದರ್ಯ ಸಮಸ್ಯೆಯೆಂದರೆ ಮೊಡವೆ. ಎಣ್ಣೆ ತ್ವಚೆಯವರೆಗೆ ಈ ಸಮಸ್ಯ